ಸಂಪುಟ : 10 ಸಂಚಿಕೆ: 184 ಪುಟ : 4+2 ಬೆಲೆ: 3.00 ಶುಕ್ರವಾರ ಆಗಸ್ಟ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 184 Pages : 4+2 Price : 3.00 Friday August 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗಜಾನನೋತ್ಸವಗಳು ದೇಶಪ್ರೇಮ ಬೆಳೆಸಲು ಪೂರಕ



■ವಿಜಯಸಾಕ್ಷಿ ಸುದ್ದಿ, ಗದಗ

ಬ್ರಿಟಿಷರ ಆಳ್ವಿಕೆಯ ವಿರುದ್ಧ ಹಿಂದೂ ಸಮಾಜದಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಲೋಕಮಾನ್ಯ ಬಾಲಗಂಗಾಧರ ತಿಲಕ್‌ರ ನೇತೃತ್ವದಲ್ಲಿ ಪ್ರಾರಂಭಗೊಂಡ ಸಾರ್ವಜನಿಕ ಗಜಾನನ ಪ್ರತಿಷ್ಠಾಪನಾ ಮಂಡಳಿಗಳು ಇಂದು ಸಮಾಜಮುಖಿ ಕಾರ್ಯಗಳ ಮೂಲಕ ಗಮನ ಸೆಳೆಯುತ್ತಿರುವುದು ಪ್ರಶಂಸನೀಯ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ಹೇಳಿದರು.

ಅವರು ಬುಧವಾರ ಸಂಜೆ ಗದಗ ನಗರದ ವೀರಶೈವ ಲೈಬ್ರರಿ ಬಳಿ ಸುದರ್ಶನ ಚಕ್ರ ಯುವ ಮಂಡಳ ಹಾಗೂ ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನಾ ಸಮಿತಿ ವತಿಯಿಂದ ಪ್ರತಿಷ್ಠಾಪನೆಗೊಂಡ ಗಜಾನನ ವೇದಿಕೆಯಲ್ಲಿ ಮಾತನಾಡಿದರು.

ರಾಜ್ಯದಲ್ಲಿ ಮೊಟ್ಟಮೊದಲ ಸಾರ್ವಜನಿಕ ಗಜಾನನೋತ್ಸವ ಬೆಳಗಾವಿಯಲ್ಲಿ ಪ್ರಾರಂಭವಾಗಿದ್ದು, ಇಂದು ಪ್ರತಿ ದೇವರನ್ನೂ ಒಂದೊಂದು ಜಾತಿಗೆ ಸೀಮಿತಗೊಳಿಸುವ ಪ್ರಯತ್ನ ನಡೆಯುತ್ತಿದೆ. ಆದರೆ ಎಲ್ಲರಲ್ಲಿಯೂ ಜಾತಿ, ಭೇದ-ಭಾವವಿಲ್ಲದೇ ಹಿಂದೂ ಸಮಾಜ ಒಗ್ಗಟ್ಟಾಗಿ ವಿಜೃಂಭಣೆಯಿಂದ ಆಚರಿಸುವ ಹಬ್ಬ ಯಾವುದಾದರೂ ಇದ್ದಲ್ಲಿ ಅದು ಸರ್ವರ ಇಷ್ಟಾರ್ಥಸಿದ್ಧಿ ಗಣೇಶ ಚತುರ್ಥಿಯಾಗಿದೆ.

ಸುದರ್ಶನ ಚಕ್ರ ಯುವ ಮಂಡಳ ಹಾಗೂ ಹಿಂದೂ ಮಹಾಗಣಪತಿ ಪ್ರತಿಷ್ಠಾಪನಾ ಸಮಿತಿ ವತಿಯಿಂದ ಲಕ್ಷ ದೀಪೋತ್ಸವ, ಧರ್ಮಸಭೆ, ಗಣಹೋಮ ಮುಂತಾದ ಕಾರ್ಯಕ್ರಮಗಳು ಜರುಗುತ್ತಿದ್ದು, ಈ ರೀತಿಯ ಸಾಮಾಜಿಕ, ಧಾರ್ಮಿಕ ಚಿಂತನೆಗಳು ಯುವಪೀಳಿಗೆಯಲ್ಲಿ ಭಕ್ತಿಭಾವ ಹಾಗೂ ದೇಶಪ್ರೇಮ ಬೆಳೆಸಲು ಪೂರಕವಾಗಿವೆ ಎಂದರು.

ಈ ಸಂದರ್ಭದಲ್ಲಿ ಗಜಾನನೋತ್ಸವ ಸಮಿತಿಯ ಗೌರವಾಧ್ಯಕ್ಷ ಶ್ರೀಕಾಂತ ಖಟವಟೆ, ಅಧ್ಯಕ್ಷ ರವಿರಾಜ ಮಾಳೇಕೊಪ್ಪಮಠ, ಕೃಷ್ಣಗೌಡ ಪಾಟೀಲ, ಸುಧೀರ ಕಾಟೀಗಾರ, ಶಂಕರ ದಹಿಂಡೆ, ಕುಮಾರ ಮಾರನಬಸರಿ, ಜಗನ್ನಾಥಸಾ ಭಾಂಡಗೆ, ಎಚ್.ಎಸ್. ಶಿವನಗೌಡ್ರ, ರಾಜು ಕುರುಡಗಿ, ರಮೇಶ ಸಜ್ಜಗಾರ, ಸಾಗರ ಪವಾರ, ವಿನಾಯಕ ಹಬೀಬ ಮುಂತಾದವರಿದ್ದರು.

## ಅಪಘಾತ: ಒಂದೇ ಕುಟುಂಬದ ಐವರು ಸೇರಿ 6 ಮಂದಿ ಬಲಿ..!

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಕೆಸಿ ರೋಡ್‌ನಿಂದ ತೆರಳುತ್ತಿದ್ದ ಆಟೋ ರಿಕ್ಷಾ ಹಾಗೂ ಬಸ್ ಮಧ್ಯೆ ಭೀಕರ ಅಪಘಾತ ಸಂಭವಿಸಿ ಆರು ಜನರು ಸಾವನ್ನಪ್ಪಿರುವ ಘಟನೆ ಕರ್ನಾಟಕ ಕೇರಳ ಗಡಿ ಭಾಗದ ತಲಪಾಡಿಯಲ್ಲಿ ನಡೆದಿದೆ. ಕೆಎಸ್‌ಆರ್‌ಟಿಸಿ ಬಸ್ ಬ್ರೇಕ್ ಫೇಲ್ ಆಗಿದ್ದರಿಂದ ಚಾಲಕನ ನಿಯಂತ್ರಣ ತಪ್ಪಿ ಈ ಅಪಘಾತ ನಡೆದಿದೆ.

### ಸಹಕಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

# ರೈತರಿಗೆ ಸಕಾಲದಲ್ಲಿ ಸಾಲ ಲಭ್ಯತೆ ಖಾತ್ರಿಪಡಿಸಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಪ್ರಸ್ತುತ ಸಾಲಿನಲ್ಲಿ 37 ಲಕ್ಷ ರೈತರಿಗೆ 28 ಸಾವಿರ ಕೋಟಿ ರೂ ಸಾಲ ವಿತರಣೆಯ ಗುರಿ ಹೊಂದಲಾಗಿದ್ದು, ಜುಲೈ ಅಂತ್ಯದವರೆಗೆ 8,69,284 ರೈತರಿಗೆ 8362.68 ಕೋಟಿ ರೂ ಸಾಲ ವಿತರಣೆ ಮಾಡಲಾಗಿದೆ. ರೈತರಿಗೆ ಸಕಾಲದಲ್ಲಿ ಕೃಷಿ ಸಾಲ ಸಿಗುವುದನ್ನು ಖಾತ್ರಿಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

ಗುರುವಾರ ಬೆಂಗಳೂರಿನ ಮುಖ್ಯಮಂತ್ರಿಗಳ ನಿವಾಸ ಕೃಷ್ಣಾದಲ್ಲಿ ನಡೆದ ಸಹಕಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ನಬಾರ್ಡ್ ರಿಯಾಯಿತಿ ಬಡ್ಡಿ ದರದ ಸಾಲದ ಮಿತಿಯನ್ನು ಹಿಂದಿನ ಸಾಲಿನಲ್ಲಿದ್ದ ರೂ.5,600 ಕೋಟಿಗಳಿಂದ ರೂ.3,236.11 ಕೋಟಿಗೆ ಅಂದರೆ ಶೇ.42.21ರಷ್ಟು ಕಡಿಮೆ ಮಾಡಿದೆ. ಆದರೂ ಸಾಲ ವಿತರಣೆಯಲ್ಲಿ ಶೇ.96.07ರಷ್ಟು ಪ್ರಗತಿ ಸಾಧಿಸಲಾಗಿದೆ. 2024-25ನೇ ಸಾಲಿನಲ್ಲಿ 29,75,598 ರೈತರಿಗೆ 25,939.09 ಕೋಟಿ ಕೃಷಿ ಸಾಲ ವಿತರಣೆ ಮಾಡಲಾಗಿದೆ ಎಂದರು.





ರಾಜ್ಯದಲ್ಲಿ 28516 ಸಹಕಾರ ಸಂಘಗಳು ಲಾಭದಲ್ಲಿದ್ದು, 14,670 ಸಂಘಗಳು ನಷ್ಟದಲ್ಲಿವೆ. ಸಾಲ ವಸೂಲಾತಿ ಸರಿಯಾಗಿ ಆಗದ ಕಾರಣ ಬಹುತೇಕ ಸಂಘಗಳು ನಷ್ಟದಲ್ಲಿದ್ದು, ಅಂತಹ ಸಾಲ ವಸೂಲಾತಿಗೆ ಕೈಗೊಂಡ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಇದರಲ್ಲಿ 2200 ಹಾಲು ಉತ್ಪಾದಕ ಸಂಘಗಳು ನಷ್ಟದಲ್ಲಿವೆ. ಹಾಲು ಉತ್ಪಾದಕ ಸಹಕಾರ ಸಂಘಗಳ ವೆಚ್ಚದ ಮೇಲೆ ನಿಗಾ ಇರಿಸಬೇಕು. ಹಾಲು ಉತ್ಪಾದನೆಯನ್ನು ಹೆಚ್ಚಿಸುವುದು ಸಂಘಗಳ ಕಾರ್ಯದರ್ಶಿಗಳ ಜವಾಬ್ದಾರಿಯಾಗಿದ್ದು, ಹಾಲು ಉತ್ಪಾದಕ ಸಹಕಾರ ಸಂಘಗಳ ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಸಹಕಾರ ಸಂಘಗಳ ಹಿರಿಯ ನಿರೀಕ್ಷಕರ 126 ಹುದ್ದೆಗಳು ಹಾಗೂ ಸಹಕಾರ ಸಂಘಗಳ ನಿರೀಕ್ಷಕರ 403 ಹುದ್ದೆಗಳು ಖಾಲಿಯಿವೆ. ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸಬೇಕು. ಸಹಕಾರ ಸಂಘಗಳ ನಿಬಂಧಕರ ಕಚೇರಿಯ ವ್ಯಾಪ್ತಿಯ ಸೇವೆಗಳನ್ನು ಗಣಕೀಕರಿಸುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ರಾಜ್ಯದಲ್ಲಿ 7074 ಗಿರವಿದಾರ ಸಂಸ್ಥೆಗಳು ಹಾಗೂ 1468 ಚೀಟಿ ಸಂಸ್ಥೆಗಳು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ 1961, ಕರ್ನಾಟಕ ಗಿರವಿದಾರರ ಅಧಿನಿಯಮ 1961 ಮತ್ತು ಚೀಟಿ ನಿಧಿಗಳ ಅಧಿನಿಯಮ 1982ರಡಿ ನೋಂದಣಿಯಾಗಿವೆ. ಅನಧಿಕೃತವಾಗಿ ಕಾರ್ಯಾಚರಿಸುತ್ತಿರುವ ಗಿರವಿದಾರ ಸಂಸ್ಥೆಗಳು ಹಾಗೂ ಚೀಟಿ ಸಂಸ್ಥೆಗಳ ಮೇಲೆ ನಿಗಾ ಇರಿಸಬೇಕು ಎಂದರು.

ರಾಜ್ಯದಲ್ಲಿ ಸಹಕಾರಿ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಸಹಕಾರ ಇಲಾಖೆ ಅಧಿಕಾರಿಗಳು ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

ಸಭೆಯಲ್ಲಿ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

> ಕನ್ನಡ ಸಾಹಿತ್ಯ ಪರಿಷತ್ತಿನ ಅವ್ಯವಹಾರಗಳ ಕುರಿತು ಡಿಆರ್‌ಸಿಎಸ್ ತನಿಖೆ ನಡೆಸುತ್ತಿದೆ. ತನಿಖೆ ನಡೆಯುತ್ತಿರುವ ಸಂದರ್ಭದಲ್ಲೇ ಕೆಲವು ಸದಸ್ಯರ ಸದಸ್ಯತ್ವವನ್ನು ಪರಿಷತ್ ರದ್ದುಪಡಿಸುತ್ತಿರುವ ಕುರಿತು ದೂರುಗಳು ಬಂದಿದ್ದು, ಈ ಕುರಿತು ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

### ಬಾನು ಮುಸ್ತಾಕ್ ನಮ್ಮ ರಾಜ್ಯದಲ್ಲಿ ಕನ್ನಡ ಭಾಷೆ ಉಳಿಸುವ ಕೆಲಸ ಮಾಡುತ್ತಿದ್ದಾರೆ

# ಸರ್ಕಾರದ ನಿರ್ಧಾರ ಸೂಕ್ತವಾಗಿದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ದಸರಾ ಉದ್ಘಾಟನೆಗೆ ಹಿರಿಯ ಸಾಹಿತಿ ಬಾನು ಮುಸ್ತಾಕ್ ಅವರು ಕನ್ನಡಕ್ಕೆ ಮೊದಲ ಬೂಕರ್ ಪ್ರಶಸ್ತಿ ತಂದುಕೊಡುವ ಮೂಲಕ ನಾಡಿನ ಕೀರ್ತಿಯನ್ನು ಎತ್ತಿ ಹಿಡಿದಿದ್ದಾರೆ. ಇವರು ದಸರಾ ಉದ್ಘಾಟನೆ ಮಾಡುತ್ತಿರುವುದು ದಸರಾ ಸಾಂಸ್ಕೃತಿಕ ಉತ್ಸವಕ್ಕೆ ಗರಿಮೆಯಾಗಿದೆ. ಇದನ್ನು ಸಹಿಸದ ಮಾಜಿ ಸಂಸದ ಪ್ರತಾಪ್ ಸಿಂಹ ರಾಜಕೀಯ ಹಿನ್ನೆಲೆಯಲ್ಲಿ ವಿರೋಧಿಸುತ್ತಿದ್ದಾರೆ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಅಸಮಾಧಾನ ವ್ಯಕ್ತಪಡಿಸಿದರು.



ಡಂಬಳ ಗ್ರಾಮದ ಪ್ರವಾಸಿ ಮಂದಿರದಲ್ಲಿ ಮಾತನಾಡಿದ ಅವರು, ಭಾರತ ಸರ್ವ ಜನಾಂಗದ ಶಾಂತಿಯ ತೋಟವಾಗಿದೆ. ಇಲ್ಲಿ ವಾಸಿಸುತ್ತಿರುವ ಎಲ್ಲಾ ಜಾತಿಯ ಜನರು ಭಾರತೀಯರೇ. ಹೀಗಾಗಿ ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಸ್ತಾಕ್ ಅವರನ್ನು ಆಹ್ವಾನಿಸಿರುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು. ಕನ್ನಡದ ಲೇಖಕಿಯಾಗಿ ಬಾನು ಮುಸ್ತಾಕ್ ನಮ್ಮ ರಾಜ್ಯದಲ್ಲಿ ಕನ್ನಡ ಭಾಷೆ ಉಳಿಸುವ ಕೆಲಸ ಮಾಡುತ್ತಿರುವವರಿಂದ ದಸರಾ ಉದ್ಘಾಟಿಸಲು ಸರ್ಕಾರ ನಿರ್ಧಾರ ಮಾಡಿರುವುದು ಸೂಕ್ತವಾಗಿದೆ. ಆದರೆ ಪ್ರತಿ ಬಾರಿಯೂ ವಿರೋಧ ಪಕ್ಷಗಳು ಆಡಳಿತ ಪಕ್ಷ ಏನೇ ಮಾಡಿದರೂ ವಿರೋಧ ಮಾಡುವುದು ಸಹಜ ಎಂದು ಟೀಕಿಸಿದರು.

ಬಿಜೆಪಿಯ ಮಹಿಳಾ ವಿರೋಧಿ ಭಾವನೆಯನ್ನು ಇದು ತೋರಿಸುತ್ತದೆ. ಮೈಸೂರಿನ ಇತಿಹಾಸ ಅರಿಯದ ಪ್ರತಾಪ್‌ಸಿಂಹ ಹಾಗೂ ಬಿಜೆಪಿಯವರು ಜನರ ಭಾವನೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಸರಿಯಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿ.ಎಸ್. ಕೊರ್ಲಹಳ್ಳಿ, ಬಸುರಡ್ಡಿ ಬಂಡಿಹಾಳ, ಮರಿಯಪ್ಪ ಸಿದ್ದಣ್ಣವರ, ಬಸುರಾಜ ಪೂಜಾರ, ಮಹೇಶ ಗಡಗಿ, ಮಹೇಶ ಕೊರ್ಲಹಳ್ಳಿ, ಗೌಸಿದ್ದಪ್ಪ ಬಿಸನಳ್ಳಿ, ಬಾಬು ಮೂಲಿಮನಿ, ಅನಿಲ ಪಲ್ಲೇದ, ಮುತ್ತಣ್ಣ ಕೊಂತಿಕಲ್ಲ, ಮಾರುತಿ ಹೊಂಬಳ, ಸಿದ್ದಲಿಂಗಯ್ಯ ಸ್ಥಾವರಮಠ, ಮಲ್ಲಿಕಾರ್ಜುನ ಪ್ಯಾಟಿ ಇದ್ದರು.

> ಬಿಜೆಪಿ ಎಂದೂ ನಾಡಿನ ಹಿತಾಸಕ್ತಿಗಾಗಿ ಇಲ್ಲಿನ ಜನರ ಪರವಾಗಿಲ್ಲ. ಬದಲಾಗಿ ಜನರ ಭಾವನೆಗಳನ್ನು ಬಂಡವಾಳ ಮಾಡಿಕೊಳ್ಳುವುದು ಇವರ ಕೆಲಸ. ದಸರಾ ಉದ್ಘಾಟನೆ ವಿಚಾರದಲ್ಲೂ ಇವರು ಅದನ್ನೇ ಮಾಡುತ್ತಿದ್ದಾರೆ. ಮೈಸೂರು ಮಹಾರಾಜರು ಸರ್ವಧರ್ಮ ಸಹಿಷ್ಣುಗಳಾಗಿದ್ದವರು. ಆದರೆ ರಾಜವಂಶದ ಬಗ್ಗೆ ಜನರಿಗಿರುವ ಗೌರವ ಭಾವನೆಯನ್ನು ಕೆಡಿಸುತ್ತಿರುವುದು ಬಿಜೆಪಿ ಹಾಗೂ ಪ್ರತಾಪ್ ಸಿಂಹ ಅವರ ಹೀನ ಮನಸ್ಥಿತಿಯನ್ನು ಬಿಂಬಿಸುತ್ತದೆ ಎಂದು ಶಾಸಕ ಜಿ.ಎಸ್. ಪಾಟೀಲ ಆಕ್ರೋಶ ವ್ಯಕ್ತಪಡಿಸಿದರು.

### ಸುಲಿಗೆ ಪ್ರಕರಣ ಭೇದಿಸಿದ ಬೆಟಗೇರಿ ಪೊಲೀಸರು:

# ಇಬ್ಬರು ಅಂತರರಾಜ್ಯ ಆರೋಪಿಗಳ ಬಂಧನ!




■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಬಡಾವಣೆ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ ಬೆಟಗೇರಿ ಬಡಾವಣೆಯಲ್ಲಿ ನಡೆದಿದ್ದ ಸುಲಿಗೆ ಪ್ರಕರಣ ಭೇದಿಸಿದ್ದಾರೆ. ಪ್ರಕರಣ ಸಂಬಂಧ ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಉತ್ತರಪ್ರದೇಶ ಮೂಲದ ರವಿ ಬಾವರಾ(33), ಮೊಹ್ಮದ ಶರೀಫ್ @ ಮೊಹ್ಮದ ಸಾಹಿಲ್ ಸಿದ್ದಕಿ (25) ಬಂಧಿತ ಆರೋಪಿಗಳಾಗಿದ್ದು, 03/08/2025 ರಂದು ಬೆಳಿಗ್ಗೆ ಗದಗ ಶಿವಸಾಯಿನಗರದ ಬನ್ನಿಕಟ್ಟೆಯ ಬಳಿ ಜಯಲಕ್ಷ್ಮೀ ರಾಮಕೃಷ್ಣ ಮಹೇಂದ್ರಕರ ಎಂಬುವವರ 20 ಗ್ರಾಂ ಮಂಗಳಸೂತ್ರವನ್ನು ಎಗರಿಸಿದ್ದರು. ಕಪ್ಪು ಬೈಕ್ ನಲ್ಲಿ ಬಂದ ದುಷ್ಕರ್ಮಿಗಳು ಮಂಗಳಸೂತ್ರವನ್ನ ಕಿತ್ತುಕೊಂಡು ಪರಾರಿಯಾಗಿದ್ದರು. ಈ ಘಟನೆಗೆ ಸಂಬಂಧಿಸಿದಂತೆ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.ಪ್ರಕರಣ ದಾಖಲಿಸಿದ ಪೊಲೀಸರು, ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ, ಉಪ-ಅಧೀಕ್ಷಕ ಮುರ್ತುಜಾ ಖಾದ್ರಿ, ಸಿಇಎನ್ ಡಿಎಸ್ಪಿ ಮಾಹಾಂತೇಶ ಸಜ್ಜನ, ಬೆಟಗೇರಿ ಸಿಪಿಐ ಧೀರಜ್ ಬಿ. ಶಿಂಧೆ, ಪಿಐ ಸಂಗಮೇಶ ಶಿವಯೋಗಿ, ಪಿಐ ಸಿದ್ದರಾಮೇಶ್ವರ ಗಡೇದ ಮತ್ತು ತಾಂತ್ರಿಕ ವಿಭಾಗದ ಅಧಿಕಾರಿಗಳ ಮಾರ್ಗದರ್ಶನದಲ್ಲಿ ತಂಡ ರಚಿಸಲಾಗಿತ್ತು.

▶▶3ನೇ ಪುಟಕ್ಕೆ


### ಶಿರಹಟ್ಟಿ ಭೂ ದಾಖಲೆಗಳ ಕಚೇರಿಗೆ ಲೋಕಾಯುಕ್ತ ಡಿವೈಎಸ್‌ಪಿ ಬಿರಾದಾರ ಭೇಟಿ

# ಬಾಕಿ ಕೆಲಸ ಪೂರ್ಣಗೊಳಿಸದಿದ್ದರೆ ಶಿಸ್ತು ಕ್ರಮ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಭೂ ದಾಖಲೆಗಳ ಕಚೇರಿಗೆ ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ಗುರುವಾರ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ, 15 ದಿನಗಳ ಒಳಗಾಗಿ ಬಾಕಿ ಇರುವ ಎಲ್ಲ ಪ್ರಕರಣಗಳನ್ನು ಇತ್ಯರ್ಥಪಡಿಸಿ ಸಾರ್ವಜನಿಕರ ಅಲೆದಾಟ ತಪ್ಪಿಸಬೇಕು. ಇಲ್ಲದಿದ್ದರೆ ಶಿಸ್ತು ಕ್ರಮ ಜರುಗಿಸುವಂತೆ ಮೇಲಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಬೆಳಿಗ್ಗೆ 11ರ ಸುಮಾರಿಗೆ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಿಬ್ಬಂದಿಗಳ ಹಾಜರಿಯನ್ನು ಪರೀಕ್ಷಿಸುತ್ತಿರುವ ಸಮಯದಲ್ಲಿ ಸರ್ವೆ ಸೂಪರ್‌ವೈಸರಗಳು ಫೀಲ್ಡ್‌ಗೆ ಹೋಗಿರುವುದಾಗಿ ಸಿಬ್ಬಂದಿಗಳು ಹೇಳಿದಾಗ, ಎಲ್ಲರಿಗೂ ಜಿಪಿಎಸ್ ಫೋ-ಟೋ ರವಾನಿಸುವಂತೆ ಸೂಚನೆ ನೀಡಿದರು. ಕೆಲವರು ನೈಜ ಜಿಪಿಎಸ್ ಫೋಟೋ ಕಳುಹಿಸಿದರು. ಕೆಲವರು ಅನಧಿಕೃತ ಗೈರು ಉಳಿದಿರುವದು, ಮೂವ್‌ಮೆಂಟ್ ರಜಿಸ್ಟರ್‌ನಲ್ಲಿ ನಮೂದಿಸದೇ ಇರುವುದು, ನಗದು ಪುಸ್ತಕವನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದು ಕಂಡು ಬಂದಿತು.



ಆಕಾರ್‌ಬಂದ್ ನಿರ್ವಹಣೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಉದ್ದೇಶಪೂರ್ವಕವಾಗಿ ಪ್ರಕರಣವನ್ನು ಇಟ್ಟುಕೊಂಡರೆ ಅಂತಹವರ ಮಾಹಿತಿಯನ್ನು ಸಹ ತಮಗೆ ನೀಡಬೇಕೆಂದು ಸೂಚಿಸಿದರು. ಶಿರಹಟ್ಟಿ ತಾಲೂಕಿಗೆ ಇರುವ ಎಡಿಎಲ್‌ಆರ್ ವಾರದಲ್ಲಿ 2 ದಿನ ಮಾತ್ರ ಲಭ್ಯವಿರುವುದು ಕಂಡು ಬಂದಿತು. ಆದರೆ ಯಾವ ದಿನ ಇಲ್ಲಿ ಲಭ್ಯ ಇರುತ್ತಾರೆಂಬುದು ಸ್ಪಷ್ಟತೆ ಇಲ್ಲದಿರುವುದರಿಂದ ಡಿಡಿಎಲ್‌ಆರ್ ಕಚೇರಿಗೆ ಮೊಬೈಲ್ ಮೂಲಕ ಸಂಪರ್ಕಿಸಿ ಆದೇಶವನ್ನು ಮಾರ್ಪಡಿಸುವಂತೆ ಸೂಚನೆ ನೀಡಿದರು.

ಭೇಟಿಯ ಸಂದರ್ಭದಲ್ಲಿ ಭೂ ದಾಖಲೆಗಳ ವಿವಿಧ ಕೆಲಸಕ್ಕಾಗಿ ಅರ್ಜಿ ಸಲ್ಲಿಸಿದ ಅರ್ಜಿದಾರರು ತಮ್ಮ ಸಮಸ್ಯೆಯನ್ನು ಲೋಕಾಯುಕ್ತರ ಮುಂದೆ ತೋಡಿಕೊಂಡರು. ಸಂಬಂಧಿಸಿದ ಸಿಬ್ಬಂದಿಯಿಂದ ಅರ್ಜಿಯನ್ನು ಪರಿಶೀಲಿಸಿ ಅವರ ಅಲೆದಾಟವನ್ನು ತಪ್ಪಿಸಬೇಕೆಂದು ಲೋಕಾಯುಕ್ತ ಡಿಎಸ್‌ಪಿ ವಿಜಯಕುಮಾರ ಬಿರಾದಾರ ಸೂಚನೆ ನೀಡಿದರು.

## ಸಾಕ್ಷಿ ಸುಭಾಷಿತ

ಮರದ ಮೇಲೆ ಕುಳಿತ ಹಕ್ಕಿಗೆ ಕೊಂಬೆ ಮುರಿದು ಬೀಳುವ ಭಯವಿರದು. ಏಕೆಂದರೆ ಅದು ನಂಬಿರುವುದು ತನ್ನ ರೆಕ್ಕೆಗಳನ್ನೇ ಹೊರತು ಕೊಂಬೆಯನ್ನಲ್ಲ. ಹಾಗೆಯೇ ನಮ್ಮ ಸಾಮರ್ಥ್ಯದ ಮೇಲೆ ನಮಗೆ ಸದಾ ಆತ್ಮವಿಶ್ವಾಸವಿರಲಿ.

– ಡಾ ಶಿವರಾಮ ಕಾರಂತ

## ಸಂಪಾದಕೀಯ

### ಬಿಹಾರದಲ್ಲಿ ಬಿಜೆಪಿ–ಜೆಡಿಯು ಮೈತ್ರಿ: ಕುತೂಹಲ ಮೂಡಿಸಿದ ಸೀಟು ಹಂಚಿಕೆ

ನಿತೀಶ್ ಕುಮಾರ್ ನಾಯಕತ್ವದಲ್ಲಿ ಎನ್‌ಡಿಎ ಮೈತ್ರಿಕೂಟವು ಬಿಹಾರ ಚುನಾವಣೆಗೆ ಸಜ್ಜಾಗುತ್ತಿರುವಂತೆಯೇ, ಸೀಟು ಹಂಚಿಕೆಯ ಸೂತ್ರವು ರಾಜಕೀಯ ವಲಯದಲ್ಲಿ ಹೊಸ ಚರ್ಚೆಯನ್ನು ಹುಟ್ಟುಹಾಕಿದೆ.

ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಇತ್ತೀಚಿನ ದೆಹಲಿ ಭೇಟಿಯ ನಂತರ ಜೆಡಿಯು 102 ಮತ್ತು ಬಿಜೆಪಿ 101 ಸ್ಥಾನಗಳಲ್ಲಿ ಸ್ಪರ್ಧಿಸುವುದು ಬಹುತೇಕ ಖಚಿತವಾಗಿದೆ. ಇದು ಎರಡೂ ಪ್ರಮುಖ ಪಕ್ಷಗಳ ನಡುವೆ ಸಮಾನ ಪಾಲುದಾರಿಕೆಗೆ ಒತ್ತು ನೀಡುತ್ತಿರುವುದು ಸ್ಪಷ್ಟ. ಆದರೆ, ಈ ಒಪ್ಪಂದದಲ್ಲಿ ಕುತೂಹಲ ಕೆರಳಿಸಿರುವುದು ಮಿತ್ರಪಕ್ಷಗಳ ಸೀಟು ಹಂಚಿಕೆ.

ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ನೇತೃತ್ವದ ಲೋಕ ಜನಶಕ್ತಿ ಪಕ್ಷಕ್ಕೆ 20 ಸ್ಥಾನಗಳನ್ನು ಹಂಚಿಕೆ ಮಾಡಿರುವುದು ಎಲ್ಲರ ಹುಬ್ಬು ಏರಿಸಿದೆ. ಕಳೆದ ಬಾರಿ ಕೇವಲ ಒಂದೇ ಕ್ಷೇತ್ರದಲ್ಲಿ ಗೆದ್ದಿದ್ದರೂ, ಅವರಿಗೆ ಇಷ್ಟು ಹೆಚ್ಚಿನ ಸ್ಥಾನಗಳನ್ನು ನೀಡಿರುವುದು, ಪಾಸ್ವಾನ್ ಬಗೆಗೆ ಬಿಜೆಪಿ ಹೈಕಮಾಂಡ್‌ಗೆ ಇರುವ ಒಲವನ್ನು ತೋರಿಸುತ್ತದೆ. ಚಿರಾಗ್ ಪಾಸ್ವಾನ್ ಅವರ ವರ್ಚಸ್ಸನ್ನು ಬಿಜೆಪಿ ಸಂಪೂರ್ಣವಾಗಿ ಬಳಸಿಕೊಳ್ಳಲು ಬಯಸಿದೆ ಎನ್ನುವುದು ಇದರಿಂದ ಸ್ಪಷ್ಟವಾಗಿದೆ.

ಇನ್ನುಳಿದಂತೆ, ಮಾಜಿ ಮುಖ್ಯಮಂತ್ರಿ ಜಿತನ್ ರಾಮ್ ಮಾಂಝಿ ಅವರ ಹಿಂದುಸ್ತಾನಿ ಅವಾಮಿ ಮೋರ್ಚಾ ಮತ್ತು ಉಪೇಂದ್ರ ಕುಶ್ವಾಹ ಅವರ ರಾಷ್ಟ್ರೀಯ ಲೋಕ ಮೋರ್ಚಾ ಪಕ್ಷಗಳಿಗೆ ತಲಾ 10 ಸ್ಥಾನಗಳು ಲಭ್ಯವಾಗಲಿದೆ ಎಂದು ತಿಳಿದು ಬಂದಿದೆ.

ಈ ಸೂತ್ರದ ಮೂಲಕ ಎನ್‌ಡಿಎ ಮೈತ್ರಿಕೂಟವು ಬಿಹಾರದಲ್ಲಿನ ಜಾತಿ ಸಮೀಕರಣಗಳನ್ನು ಮತ್ತು ಪ್ರಾದೇಶಿಕ ನಾಯಕರ ಪ್ರಭಾವವನ್ನು ಸಮರ್ಥವಾಗಿ ಬಳಸಿಕೊಳ್ಳಲು ಯತ್ನಿಸಿದೆ. ಸದ್ಯದಲ್ಲೇ ಅಧಿಕೃತ ಘೋಷಣೆ ಹೊರಬೀಳಲಿದ್ದು, ಈ ಹಂಚಿಕೆಯು ಮೈತ್ರಿಕೂಟದ ಗೆಲುವಿಗೆ ಹೇಗೆ ನೆರವಾಗಲಿದೆ ಎಂಬುದನ್ನು ಕಾದು ನೋಡಬೇಕಿದೆ.

**ಪ್ಲಾಸ್ಟಿಕ್ ಮುಕ್ತ, ಆಪರೇಷನ್ ಸಿಂದೂರ ಗಣೇಶ**

# ನೋಡಬನ್ನಿ, ಪರಿಸರಸ್ನೇಹಿ ಗಣಪನ




ಆರೋಗ್ಯ ಇಲಾಖೆಯ ಕಿರಿಯ ಪ್ರಯೋಗಶಾಲಾ ತಂತ್ರಜ್ಞರೊಬ್ಬರು ಪ್ಲಾಸ್ಟಿಕ್ ಮುಕ್ತ, ಪರಿಸರ ಸ್ನೇಹಿ ಹಾಗೂ ದೇಶ ಭಕ್ತಿಗೆ ಸಂಬಂಧಿಸಿದಂತೆ ಗಣೇಶ ಮೂರ್ತಿಯ ಅಲಂಕಾರ ಮಾಡಿದ್ದು, ಹಲವರು ಇವರ ಮನೆಗೆ ಭೇಟಿ ನೀಡಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಬೆಟಗೇರಿಯ ನಿವಾಸಿಯೊಬ್ಬರು ತಮ್ಮ ಮನೆಯ ಗಣೇಶನನ್ನು ಸಾರ್ವಜನಿಕ ಗಣೇಶ ಮೂರ್ತಿಯಂತೆ ಅಲಂಕರಿಸಿದ್ದಾರೆ ಮತ್ತು ಆಪರೇಷನ್ ಸಿಂದೂರ್‌ನ ಫೋಟೋಗಳಿಂದ ಅಲಂಕರಿಸಿದ್ದಾರೆ.

ಗಣೇಶನ ಮುಂದೆ ಹಿಮಾಲಯ ಪರ್ವತ ಶ್ರೇಣಿ, ಅದರೊಂದಿಗೆ ಆಪರೇಷನ್ ಸಿಂದೂರವನ್ನು ಬಿಂಬಿಸುವ ಬ್ಯಾನರ್‌ಗಳು ಗಣೇಶನ ಭಕ್ತಿ ಭಾವದ ಜತೆಗೆ ಮನದಲ್ಲಿ ದೇಶಪ್ರೇಮವನ್ನು ಅರಳಿಸುತ್ತಿವೆ. ಈ ಆಪರೇಷನ್ ಸಿಂದೂರ ಗಣೇಶ ಇರುವುದು ಬೆಟಗೇರಿಯ ವೆಲ್‌ಫೇರ್ ಟೌನ್‌ಶಿಪ್‌ನ ಮಂಜುನಾಥ ಭಂಡಾರಿ ಅವರ ಮನೆಯಲ್ಲಿ.

ನೆರೆಹೊರೆಯವರು ಮತ್ತು ಇತರ ಸಂದರ್ಶಕರು ಮಂಜುನಾಥ ಭಂಡಾರಿ ಅವರ ಮನೆಗೆ ಗಣೇಶನ ವಿಶೇಷ ಅಲಂಕಾರವನ್ನು ನೋಡಲು ಭೇಟಿ ನೀಡುತ್ತಿದ್ದಾರೆ. ಈ ವರ್ಷದ ಅಲಂಕಾರ ಅಷ್ಟೇ ಅಲ್ಲ, ಪ್ರತಿ ವರ್ಷ ಗಣೇಶ ಮೂರ್ತಿಯ ಅಲಂಕಾರವೂ ಇವರ ಮನೆಯಲ್ಲಿ ವಿಶೇಷವಾಗಿಯೇ ಇರುತ್ತದೆ. ಮಂಜುನಾಥ ಮತ್ತು ಅವರ ಪತ್ನಿ ಪುಷ್ಪಾ, ಮಕ್ಕಳು ಜಯಂತ ಮತ್ತು ಶ್ರೇಯಾ ಎಲ್ಲರೂ ಜತೆಗೂಡಿ ಈ ಅಲಂಕಾರದಲ್ಲಿ ಪಾಲ್ಗೊಳ್ಳುತ್ತಾರೆ. ಈ ಕುಟುಂಬವೂ ಪ್ರತಿ ವರ್ಷ ಪರಿಸರ ಸ್ನೇಹಿ ಅಲಂಕಾರ ಮಾಡುತ್ತ ಬಂದಿದೆ ಮತ್ತು ಥರ್ಮಾಕೋಲ್ ಹಾಗೂ ಇತರೆ ಪ್ಲಾಸ್ಟಿಕ್ ವಸ್ತುಗಳನ್ನು ಬಳಸಿಲ್ಲ.

ಮಂಜುನಾಥ ಭಂಡಾರಿ ಪ್ರಯೋಗಾಲಯ ತಂತ್ರಜ್ಞರಾಗಿದ್ದು, ಬೆಟಗೇರಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕಿರಿಯ ವೈದ್ಯಕೀಯ ಪ್ರಯೋಗಶಾಲಾ ತಂತ್ರಜ್ಞರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರತಿ ವರ್ಷ ವಿಶೇಷ ಸಂದೇಶ ಮತ್ತು ಫೋಟೋದಿಂದ ಗಣೇಶನನ್ನು ಅಲಂಕರಿಸುವಲ್ಲಿ ಇವರು ಆಸಕ್ತಿ ಹೊಂದಿದ್ದಾರೆ. ಇವರು ಗಣೇಶ ಹಬ್ಬದ ನೆಪವಿಟ್ಟುಕೊಂಡು ಪರಿಸರ ಸ್ನೇಹಿ ಕಾರ್ಯವನ್ನು ಹಮ್ಮಿಕೊಳ್ಳುತ್ತಾರೆ. ಕಳೆದ ಬಾರಿ 1001 ಸಸಿಗಳನ್ನು ವಿತರಿಸಿ ಪರಿಸರ ಜಾಗೃತಿ ಮೂಡಿಸಿದ್ದರು.

ಸಂಸ್ಕೃತ ಭಾರತೀ ಜಿಲ್ಲಾ ಶಿಬಿರ ಆಯೋಜಕ ಮೌನೇಶ ಭಜಂತ್ರಿ ಮಂಜುನಾಥ ಅವರ ಮನೆಗೆ ಭೇಟಿ ನೀಡಿದ ನಂತರ, ಹಿಮಾಲಯದ ಮಂಜಿನ ಗಿರಿಶಿಖರಗಳು, ತ್ರಿಶೂಲಗಳು, ಶಿವಲಿಂಗ ಮುಂದೆ ಕುಳಿತ ಗಣಪ ಮನಕ್ಕೆ ಮುದ ನೀಡಿದರೆ, ಆಪರೇಷನ್ ಸಿಂದೂರ, ತ್ರಿವರ್ಣ ಧ್ವಜ ಹಾಗೂ ಕ್ಷಿಪಣಿಗಳನ್ನು ನೋಡಿದಾಗ ದೇಶಪ್ರೇಮ ಉಕ್ಕಿ ಬರುತ್ತದೆ. ಒಟ್ಟಿನಲ್ಲಿ ಧನ್ಯತಾ ಭಾವ ಮೂಡಿಸಿ, ಪರಿಸರದ ಬಗ್ಗೆ ಕಾಳಜಿ ಮನದಂಚಿನಲ್ಲಿ ಮಿಂಚಿನಂತೆ ಮೂಡಿಸುವ ಪ್ರಯತ್ನ ಮಂಜುನಾಥ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಮಂಜುನಾಥ ಅವರು ಅವರ ಗಣೇಶ ಹಬ್ಬದ ಬಗ್ಗೆ ಹೇಳಿದ್ದು ಹೀಗೆ–'ಮೊದಲ ಬಾರಿಗೆ ಪರಿಸರ ಸ್ನೇಹಿ ಗಣೇಶ ಹಬ್ಬವನ್ನು ಆಚರಿಸಲು ನಿರ್ಧರಿಸಿದಾಗ ಮುತ್ತಲ ಎಲೆಗಳಿಂದ ಚಹಾದ ಕಪ್‌ಗಳನ್ನು ತಯಾರಿಸಿ ಒಟ್ಟು 500 ಚಹಾ ಕಪ್‌ಗಳಿಂದ ಅಲಂಕಾರ ಮಾಡಿದ್ದೆವು. ಪ್ರತಿ ವರ್ಷವೂ ವಿಶೇಷ ರೀತಿಯಿಂದ ಗಣೇಶ ಹಬ್ಬ ಆಚರಿಸಲು ಖುಷಿ ಎನಿಸುತ್ತದೆ. ಎಲ್ಲರೂ ಪರಿಸರ ಸ್ನೇಹಿ ಹಬ್ಬವನ್ನು ಆಚರಿಸಲು ನಮ್ಮ ವಿನಂತಿ. ನಮ್ಮ ಸ್ನೇಹಿತರು, ಹಿತೈಷಿಗಳು, ಬಂಧು ಬಳಗದವರು ನಮ್ಮ ಗಣೇಶನನ್ನು ಮತ್ತು ಅಲಂಕಾರವನ್ನು ನೋಡಿ ಸಂತಸಪಡುತ್ತಾರೆ ಹಾಗೂ ನಮ್ಮನ್ನು ಪ್ರೋತ್ಸಾಹಿಸುತ್ತಾರೆ'.

**– ರಘೋತ್ತಮ ಕೊಪ್ಪರ.**
ಪತ್ರಕರ್ತರು, ಪಾರಂಪರಿಕ ವೈದ್ಯರು.

# ಪೊಲೀಸ್ ಇಲಾಖೆಯಿಂದ ಪಥ ಸಂಚಲನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬದ ನಿಮಿತ್ತ ಪಟ್ಟಣದಲ್ಲಿ ಗುರುವಾರ ರೋಣ ಸಿಪಿಐ ಎಸ್.ಎಸ್. ಬೀಳಗಿ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿಗಳು ಪಥ ಸಂಚಲ ನಡೆಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.



ಬಸ್ ನಿಲ್ದಾಣದಿಂದ ಪ್ರಾರಂಭವಾದ ಪಥ ಸಂಚಲನ ಜಕ್ಕಲಿ ಕ್ರಾಸ್, ಹಳೆ ಬಸ್ ನಿಲ್ದಾಣ, ಸಂತೆ ಬಜಾರದ ಗಣೇಶ ದೇವಸ್ಥಾನ, ಗ್ರಾಮದೇವತಾ ದೇವಸ್ಥಾನ, ಪ.ಪಂ ಮೂಲಕ ಮರಳಿ ಬಸ್ ನಿಲ್ದಾಣಕ್ಕೆ ಆಗಮಿಸಿತು. ಪಿಎಸ್‌ಐ ಐಶ್ವರ್ಯ ನಾಗರಾಳ, ಎಎಸ್‌ಐ ಶೇಖರ ಹೊಸಳ್ಳಿ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಇದ್ದರು.

# ಭೀಕರ ಅಪಘಾತ: ಇಬ್ಬರು ಸಾವು

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಭೀಕರ ಅಪಘಾತ ಸಂಭವಿಸಿ ಇಬ್ಬರು ಸಾವನ್ನಪ್ಪಿದ್ದು, ಒಂಭತ್ತು ಮಂದಿಗೆ ಗಂಭೀರ ಗಾಯಗಳಾಗಿರುವ ಘಟನೆ ಬೆಳಗಾವಿ ತಾಲೂಕಿನ ಹಿರೇಬಾಗೇವಾಡಿ ಬಳಿಯ ಬಡೇಕೊಳ್ಳಮಠ ರಾಷ್ಟ್ರೀಯ ಹೆದ್ದಾರಿ ಘಾಟ್ ನಲ್ಲಿ ಜರುಗಿದೆ. ಹುಬ್ಬಳ್ಳಿಯಿಂದ ಪುಣೆಗೆ ಹೊರಟಿದ್ದ ಗೋಗಟೆ ಸಂಸ್ಥೆಗೆ ಸೇರಿದ ಬಸ್ ಪಲ್ಟಿಯಾಗಿದೆ. 12 ಜನ ಪ್ರಯಾಣಿಸುತ್ತಿದ್ದ ಬಸ್ ನಲ್ಲಿ ಓರ್ವ ಮಹಿಳೆ, ಓರ್ವ ಪುರುಷ ಸಾವನ್ನಪ್ಪಿದ್ದಾರೆ. ಅಪಘಾತ ಸಂಭವಿಸಿದ ಬಳಿಕ ಒಂಬತ್ತು ಜನರನ್ನ ಹಿರೇಬಾಗೇವಾಡಿ ಠಾಣೆ ಸಿಬ್ಬಂದಿ ಮತ್ತು ಸ್ಥಳೀಯರು ರಕ್ಷಣೆ ಮಾಡಿ ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಹಿರೇಬಾಗೇವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

**9ನೇ ದಿನಕ್ಕೆ ಮುಂದುವರೆದ ಅಹೋರಾತ್ರಿ ಧರಣಿ; ಜಿಲ್ಲಾಡಳಿತದ ವಿರುದ್ಧ ರೈತರ ಆಕ್ರೋಶ**

# ಆಡಳಿತ ಕಣ್ಣಿದ್ದೂ ಕುರುಡಾಗಿದೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸತತ 9 ದಿನಗಳಿಂದ ಜಿಲ್ಲಾಡಳಿತದ ಎದುರು ಉತ್ತರ ಕರ್ನಾಟಕ ಮಹಾಸಭಾದಿಂದ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಿಲ್ಲೆಯ ರೈತರು ಅಹೋರಾತ್ರಿ ಧರಣಿ ನಡೆಸುತ್ತಿದ್ದು, ಮಂಗಳವಾರ ಜಿಲ್ಲಾಡಳಿತದ ಎದುರು ಗೋವನ್ನು ಕಟ್ಟಿ ಮೇವು ಹಾಕುವುದರೊಂದಿಗೆ ಆಡಳಿತದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಂಗಳವಾರ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಧರಣಿ ಸ್ಥಳಕ್ಕೆ ಭೇಟಿ ನೀಡಿ, ರೈತರನ್ನು ಬೆಂಬಲಿಸಿ ಮಾತನಾಡುತ್ತಾ, ಅಹೋರಾತ್ರಿ ಹೋರಾಟ ಪ್ರಾರಂಭವಾಗಿ 8 ದಿನಗಳಾದರೂ ಜಿಲ್ಲಾಡಳಿತ ಮತ್ತು ಜಿಲ್ಲಾ ಉಸ್ತುವಾರಿ ಸಚಿವರು ಧರಣಿ ನಿರತರನ್ನು ಭೇಟಿಯಾಗಿ ಅವರ ನ್ಯಾಯಯುತವಾದ ಬೇಡಿಕೆಗಳನ್ನು ಇಡೇರಿಸದಿರುವುದು ಖೇದಕರ ಸಂಗತಿ. ರೈತರು ತಲೆತಲಾಂತರಗಳಿಂದ ಅರಣ್ಯ ಜಮೀನುಗಳನ್ನು ಸಾಗುವಳಿ ಮಾಡಿಕೊಂಡು ಬದುಕು ನಡೆಸುತ್ತಿದ್ದಾರೆ. ಆದರೆ ಸರ್ಕಾರ ಹಕ್ಕುಪತ್ರ ನೀಡದೇ, ರೈತರಿಗೆ ಕಿರುಕುಳ ನೀಡುತ್ತಿದೆ. ಜೊತೆಗೆ ನಾಗಾವಿ ಗ್ರಾಮದಲ್ಲಿನ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಿರ್ಮಾಣಕ್ಕಾಗಿ ರೈತರು ಪೂರ್ವಜರ ಕಾಲದಿಂದ ಸಾಗುವಳಿ ಮಾಡುತ್ತಿದ್ದ ನೂರಾರು ಎಕರೆ ಕೃಷಿ ಭೂಮಿಯನ್ನು ಪರಿಹಾರ ನೀಡದೇ ಒಕ್ಕಲೆಬ್ಬಿಸಿರುವುದು ಖಂಡನೀಯ ಎಂದರು.

ಮಳೆ–ಚಳಿ ಎನ್ನದೇ ರೈತರು ತಮ್ಮ ಸಣ್ಣ ಮಕ್ಕಳನ್ನು ಕಟ್ಟಿಕೊಂಡು ರಾತ್ರಿಯಿಡೀ ಹೋರಾಟ ಮಾಡುತ್ತಿದ್ದಾರೆ. ಹಾಗಾಗಿ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಡಳಿತ ಕೂಡಲೇ ಈ ರೈತರ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ಬಿಜೆಪಿ ಮುಖಂಡರಾದ ಕರಿಗೌಡ್ರ, ಭದ್ರೇಶ ಕುಸಲಾಪುರ, ಸಂಜೀವ ಸ್ವಾಮಿಗಳು ಅಶೋಕ ಕರೂರು, ಶೇಷಗಿರಿ ಮುಂತಾದವರು ಭಾಗವಹಿಸಿದ್ದರು. ಸುರೇಶ ಮಹಾರಾಜ, ಧನ್ನುರಾಮ ತಂಬೂರಿ ಇವರುಗಳು ಭಜನೆಯ ಮೂಲಕ ಆತ್ಮಸ್ಥೈರ್ಯ ತುಂಬಿದರು. ಪ್ರತಿಭಟನಾ ಸ್ಥಳದಲ್ಲಿ ಎನ್.ಟಿ. ಪೂಜಾರ, ಚಂಬಣ್ಣ ಚನ್ನಪಟ್ಟಣ, ನಾಮದೇವ, ನಿಂಗಪ್ಪ, ಚನ್ನಪ್ಪ ಭಗತ ಸೇರಿದಂತೆ ಜಿಲ್ಲೆಯ ಹಲವು ರೈತರು, ಮಹಿಳೆಯರು ಇದ್ದರು.

### ಗೋವಿಗೆ ಪೂಜೆ

ಗೋಮಾತೆಗೆ ಪೂಜೆಯನ್ನು ಮಾಡಿ ಜಿಲ್ಲಾಡಳಿತ ಕಛೇರಿ ಆವರಣದಲ್ಲಿಯೇ ಕಟ್ಟಿ, ಗೋವಿಗೆ ಹುಲ್ಲನ್ನು ಹಾಕಿ ಮೇಯಿಸಿ ಮುಂದಿನ ದಿನಗಳಲ್ಲಿ ನಮ್ಮ ಎಲ್ಲಾ ಜಾನುವಾರುಗಳನ್ನು ಜಿಲ್ಲಾಡಳಿತ ಕಛೇರಿ ಎದುರು ತರುತ್ತೇವೆಂದು ಜಿಲ್ಲಾಡಳಿತದ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು.

ರೈತರು ಸತತ ಎಂಟು ದಿನಗಳಿಂದ ನ್ಯಾಯಯುತವಾದ ಬೇಡಿಕೆಗಳ ಈಡೇರಿಕೆಗಾಗಿ ಅಹೋರಾತ್ರಿ ಧರಣಿಗೆ ಕುಳಿತಿದ್ದಾರೆ. ಜಿಲ್ಲಾಡಳಿತ ಮತ್ತು ಉಸ್ತುವಾರಿ ಸಚಿವರು ಕಣ್ಣಿದ್ದೂ ಕುರುಡರಂತೆ ವರ್ತಿಸುತ್ತಿದ್ದಾರೆ.

ಜಿಲ್ಲೆಯ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ರೈತರನ್ನು ಸೌಜನ್ಯಕ್ಕಾದರೂ ಭೇಟಿಯಾಗದಿರುವುದು ದುರದೃಷ್ಟಕರ ಸಂಗತಿ. ಕೂಡಲೇ ರೈತರ ನ್ಯಾಯಯುತವಾದ ಬೇಡಿಕೆಗಳನ್ನು ಜಿಲ್ಲಾಡಳಿತ ಇಡೇರಿಸಬೇಕು.

**– ಎಸ್.ವಿ. ಸಂಕನೂರ.**
ವಿಧಾನ ಪರಿಷತ್ ಸದಸ್ಯರು.

# ಕೋಚಲಾಪೂರದಲ್ಲಿ ಶ್ರಾವಣ ಭಜನೆ ಮಂಗಲ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಕೋಚಲಾಪೂರ ಗ್ರಾಮದಲ್ಲಿ ಸೋಮವಾರ ರಾತ್ರಿ ಶ್ರಾವಣ ಭಜನೆಗೆ ಮಂಗಲ ಹಾಡಲಾಯಿತು. ಬನಶಂಕರಿ ಭಜನಾ ಮಂಡಳಿಯ ಆಶ್ರಯದಲ್ಲಿ ಕಳೆದ ಒಂದು ತಿಂಗಳಿನಿಂದ ನಡೆದ ಭಜನಾ ಕಾರ್ಯಕ್ರಮವನ್ನು ಅನ್ನ ಸಂತಸರ್ಪಣೆಯೊಂದಿಗೆ ಮಂಗಲ ಮಾಡಲಾಯಿತು.

ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ಶ್ರಾವಣ ಮಾಸವನ್ನು ಹಿಂದೂ ಧರ್ಮದಲ್ಲಿ ಪುಣ್ಯದ ಮಾಸವೆಂದು ಕರೆಯಲಾಗುತ್ತಿದೆ. ಈ ಮಾಸದಲ್ಲಿ ಕೈಗೊಂಡ ಪೂಜೆ, ವ್ರತ ಮುಂತಾದವುಗಳೆಲ್ಲವೂ ನಿಶ್ಚಿತ ಫಲ ಕೊಡುತ್ತವೆ ಎಂಬ ನಂಬುಗೆಯಿದೆ. ಇಂದಿನ ದಿನಗಳಲ್ಲಿ ಭಜನಾ ತಂಡಗಳು ಕಡಿಮೆಯಾಗುತ್ತಿರುವುದು ವಿಷಾದನೀಯ ಸಂಗತಿ. ಆದ್ದರಿಂದ ನಮ್ಮ ಹಿರಿಯರು ಹಿಂದಿನಿಂದ ಹಾಕಿಕೊಂಡ ಪದ್ಧತಿಗಳನ್ನು ನಾವುಗಳು ಅನುಸರಿಸಿ, ಅವುಗಳನ್ನು ಮುಂದಿನ ಪೀಳಿಗೆಗೂ ವಿಸ್ತರಿಸಬೇಕಾದುದು ನಮ್ಮ ಕರ್ತವ್ಯವಾಗಿದೆ ಎಂದರು.

ರೋಟರಿ ಅಧ್ಯಕ್ಷ ಡಾ. ಆರ್. ಕೆ. ಗಚ್ಚಿನಮಠ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಶ್ರಾವಣ ಮಾಸದ ಮಹತ್ವ ಮತ್ತು ಭಜನೆಯ ಮಹತ್ವ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಬನಶಂಕರಿ ಭಜನಾ ಮಂಡಳಿಯ ಸರ್ವ ಸದ್ಯರು, ಡಾ. ಎಲ್.ಎಸ್. ಗೌರಿ, ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ, ನಿವೃತ್ತ ಶಿಕ್ಷಕ ಆರ್.ಎಸ್. ಮಠ, ವೀರಭದ್ರಪ್ಪ ಕೆರಿಯವರ, ಶೇಖರಗೌಡ ಅಯ್ಯನಗೌಡ್ರ, ಜಗದೀಶ ಹಿರೇಮಠ, ಬಸಯ್ಯ ಮೇಟಿಮಠ, ಅಂದಾನಯ್ಯ ಮಾಲಗಿತ್ತಿಮಠ, ವಿರೂಪಾಕ್ಷಯ್ಯ ಮೇಟಿಮಠ, ಸಂಗಯ್ಯ ಮಾಲಗಿತ್ತಿಮಠ, ಮಲ್ಲರಡ್ಡೆಪ್ಪ ರಡ್ಡೇರ, ಶರಣಪ್ಪಗೌಡ ಅಯ್ಯನಗೌಡ್ರ, ಶಂಕರಗೌಡ ಅಯ್ಯನಗೌಡ್ರ ಮುಂತಾದವರಿದ್ದರು.

# ಜ್ಞಾನಕ್ಕೆ ಸಮಾನವಾದುದು ಬೇರೊಂದಿಲ್ಲ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈ ಜಗತ್ತಿನಲ್ಲಿ ಜ್ಞಾನಕ್ಕೆ ಸಮಾನವಾದ ವಸ್ತು ಬೇರೊಂದಿಲ್ಲ. ಈ ಜ್ಞಾನವು ಮನುಷ್ಯನಿಗೆ ಪುಸ್ತಕಗಳನ್ನು ಓದುವ ಮೂಲಕ ಬರುತ್ತದೆ. ಆದ್ದರಿಂದ ಟಿವಿ, ಮೊಬೈಲ್‌ಗಳನ್ನು ದೂರ ಸರಿಸಿ ಎಲ್ಲರೂ ಪುಸ್ತಕಗಳಿಗೆ ಶರಣು ಹೋಗಬೇಕೆಂದು ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಶ್ರೀಗಳು ಹೇಳಿದರು.

ಸಮೀಪದ ನಿಡಗುಂದಿಯ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಜರುಗಿದ ಶಿವಾನುಭವ ಸಂಪದದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಕೋಟುಮಚಗಿಯ ಗ್ರಂಥಪಾಲಕ ಸುರೇಶ ಪತ್ತಾರ ಶಿವಾನುಭವ ಸಂಪದವನ್ನು ಉದ್ಘಾಟಿಸಿ, ಗ್ರಂಥಾಲಯವು ಎಲ್ಲ ವಿಷಯಗಳ ತಾಯಿಯಾಗಿದೆ. ಓದುಗನಿಗೆ ವಾಚನಾಲಯವೇ ವೈಕುಂಠವಾಗಿದೆ. ಆದ್ದರಿಂದ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಿ ಮತ್ತು ನಿಮ್ಮ ಮಕ್ಕಳೂ ಸಹ ಗ್ರಂಥಾಲಯಕ್ಕೆ ಹೋಗಿ ಓದುವುದನ್ನು ರೂಢಿಸಿಕೊಳ್ಳುವುದನ್ನು ಪ್ರೋತ್ಸಾಹಿಸಿ ಎಂದರು.

ನಿಡಗುಂದಿಯ ಧರ್ಮರ ಮಠದ ಷಣ್ಮುಖಪ್ಪಜ್ಜನವರು ಸಮ್ಮುಖ ವಹಿಸಿದ್ದರು. ಎಸ್.ಎಸ್. ಎಲ್.ಸಿಯಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಅಕ್ಕಮಹಾದೇವಿ ಮಹಿಳಾ ವೇದಿಕೆಯವರು ಪ್ರಾರ್ಥನೆ ಹೇಳಿದರು. ಬಸವರಾಜ ಜಂಗಣ್ಣವರ, ಶರಣಪ್ಪ ಅರಮನಿ ಸಂಗಿತ ಸೇವೆ ನೀಡಿದರು. ಶಿಕ್ಷಕ ಡಿ.ಎಸ್. ಬಡಿಗೇರ ನಿರೂಪಿಸಿದರು. ಎ.ಎಸ್. ಗೆದಗೇರಿ ವಂದಿಸಿದರು.

# ರಕ್ತದಾನ ಶ್ರೇಷ್ಠ ದಾನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅತ್ಯಂತ ಅವಶ್ಯಕ ಮತ್ತು ಅನಿವಾರ್ಯ ಸಂದರ್ಭದಲ್ಲಿ ರೋಗಿಯ ಜೀವ ಉಳಿಯಲು ರಕ್ತದ ಅವಶ್ಯಕತೆ ಇದ್ದೇ ಇದೆ. ಹೀಗೆ ರಕ್ತವನ್ನು ಒದಗಿಸುವಲ್ಲಿ ಬ್ಲಡ್ ಬ್ಯಾಂಕ್‌ಗಳು ಮಹತ್ತರ ಸೇವೆ ಒದಗಿಸುತ್ತಿವೆ. ನಾವೂ ಸಹ ನಮಗೆ ಅವಕಾಶ ಸಿಕ್ಕಾಗಲೆಲ್ಲ ರಕ್ತದಾನ ಮಾಡುವುದನ್ನು ರೂಢಿಸಿಕೊಳ್ಳಬೇಕು ಎಂದು ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ತಿಳಿಸಿದರು.

ಇಲ್ಲಿನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಈಚೆಗೆ ಹುಲಕೋಟಿಯ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯವರು ಏರ್ಪಡಿಸಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಈಶ್ವರೀಯ ವಿಶ್ವವಿದ್ಯಾಲಯವು ಕೇವಲ ಧಾರ್ಮಿಕ ಸೇವೆಯನ್ನಲ್ಲದೆ, ರಕ್ತದಾನ ಶಿಬಿರವನ್ನು ಏರ್ಪಡಿಸುವ ಮೂಲಕ ಸಮಾಜಿಕ ಸೇವೆಗೂ ಮುಂದಾಗಿರುವುದು ಸ್ತುತ್ಯ ಕಾರ್ಯ. ಒಟ್ಟು ಒಂದು ಲಕ್ಷ ಯೂನಿಟ್ ರಕ್ತವನ್ನು ಸಂಗ್ರಹಿಸಿ ಕೊಡುವ ಗುರಿಯನ್ನಿರಿಸಿಕೊಂಡಿರುವ ಈ ವಿದ್ಯಾಲಯದ ಸೇವೆ ಶ್ಲಾಘನೀಯ ಎಂದರು. ಡಾ. ಸಂಜನಾ ಮಾತನಾಡಿ, ಕೆಲವರು ರಕ್ತದಾನ ಮಾಡಲು ಹಿಂಜರಿಯುತ್ತಾರೆ. ಎಲ್ಲಿ ತಮ್ಮ ಮೈಯಲ್ಲಿ ರಕ್ತದ ಕೊರೆತಯಾಗುತ್ತದೆಯೋ ಎಂಬುದು ಅವರ ಅಂಜಿಕೆ. ಈ ಅಂಜಿಕೆಯನ್ನು ದೂರ ಸರಿಸಿ ಆರೋಗ್ಯವಂತ ಯುವಕ ಯುವತಿಯವರು ರಕ್ತದಾನಕ್ಕೆ ಮುಂದೆ ಬರಬೇಕು. ನೀವು ರಕ್ತ ನೀಡಿದ ಅರ್ಧ ಘಂಟೆಯೊಳಗಾಗಿ ಮತ್ತೆ ಹೊಸ ರಕ್ತ ನಿಮ್ಮ ಮೈಯಲ್ಲಿ ಉತ್ಪತ್ತಿಯಾಗುತ್ತದೆ. ರಕ್ತದಾನ ಮಾಡುವುದರಿಂದ ಹೃದಯಾಘಾತದ ಸಂಭವ ಕಡಿಮೆಯಿರುತ್ತದೆ ಎಂದರು.



ಸಂಚಾಲಕಿ ಬಿ.ಕೆ. ಸವಿತಕ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಬಿರದಲ್ಲಿ 50 ಜನರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಗದಗ ಈಶ್ವರೀಯ ವಿಶ್ವ ವಿದ್ಯಾಲಯದ ಬಿ.ಕೆ. ರೇಖಾ, ಬಿ.ಕೆ. ಜೋಸ್ನ, ಪ್ರಯೋಗಾಲಯ ತಂತ್ರಜ್ಞ ವೆಂಕಟೇಶ, ಈಶ್ವರೀಯ ಪರಿವಾರದವರು ಉಪಸ್ಥಿತರಿದ್ದರು.

### ವಿಶೇಷ ಸಹಕಾರ ತರಬೇತಿ ಶಿಬಿರದಲ್ಲಿ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಜಿ.ಪಿ. ಪಾಟೀಲ


# ಹಣ ದುರುಪಯೋಗ ಪ್ರಕರಣಗಳನ್ನು ನಿಯಂತ್ರಿಸಬೇಕಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಕೆ.ಸಿ.ಸಿ. ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಒಬ್ಬ ನಿರ್ದೇಶಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಗುರುವಾರ ರೋಣದ ಕೆ.ಸಿ.ಸಿ ಬ್ಯಾಂಕ್ ಸಭಾಭವನದಲ್ಲಿ ಜರುಗಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳದ ಅಧ್ಯಕ್ಷರು, ಕೆ.ಸಿ.ಸಿ ಬ್ಯಾಂಕ್ ಧಾರವಾಡ ನಿರ್ದೇಶಕ ಜಿ.ಪಿ. ಪಾಟೀಲ ಉದ್ಘಾಟಿಸಿ ಮಾತನಾಡಿ, ಇತ್ತೀಚೆಗೆ ಪ್ರಾಥಮಿಕ ಸಹಕಾರ ಸಹಕಾರ ಸಂಘಗಳಲ್ಲಿ ಹಣ ದುರುಪಯೋಗ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಸಂಘದ ಅಧ್ಯಕ್ಷರು ಹಾಗೂ ಆಡಳಿತ ಮಂಡಲಿ ನಿರ್ದೇಶಕರ ಕರ್ತವ್ಯ ಪ್ರಮುಖವಾಗಿದೆ ಎಂದರು.

ಗದಗ ಕೆ.ಸಿ.ಸಿ ಬ್ಯಾಂಕ್ ಮಾಜಿ ನಿರ್ದೇಶಕ ಸಿ.ಕೆ. ಮಾಳಶೆಟ್ಟಿ ಮಾತನಾಡಿ, ಸಹಕಾರ ಕ್ಷೇತ್ರದ ಆರೋಗ್ಯಕರ ಬೆಳವಣಿಗೆ ಜನಾಗೃತಿಯನ್ನು ಅವಲಂಬಿಸಿರುತ್ತದೆ. ಜಾಗೃತ ಜನರಲ್ಲಿ ಸಹಕಾರ ಪ್ರಜ್ಞೆ ಮೂಡಿಬಂದಲ್ಲಿ ಸಹಕಾರಿ ವ್ಯವಸ್ಥೆಯ ಅರಿವು ಜಾಗೃತಗೊಳ್ಳುತ್ತದೆ. ಸಹಕಾರ ಸಂಸ್ಥೆಗಳ ಸದಸ್ಯ ಬಳಗ ತಮ್ಮ ಸಹಕಾರ ಸಂಸ್ಥೆಗಳ ಬಗ್ಗೆ ಸದಾ ಜಾಗೃತರಾಗಿರುವುದೇ ಆ ಸಂಘದ ಬೆಳವಣಿಗೆಗೆ ಪೂರಕವಾಗಿರುತ್ತದೆ ಎಂದರು.

ಹಿರಿಯ ಸಹಕಾರಿಗಳಾದ ವ್ಹಿ.ಡಿ. ಮೇಘರಾಜ ಮಾತನಾಡುತ್ತಾ, ಸಹಕಾರ ತತ್ವಗಳು ಸಮಾಜದಲ್ಲಿ ಸಮಾನತೆ, ಆರ್ಥಿಕತೆ ಸಬಲೀಕರಣಕ್ಕೆ ಪೂರಕವಾಗಿವೆ. ಇದರಿಂದ ಸಾರ್ವಜನಿಕ ವಲಯ ಮತ್ತು ಖಾಸಗಿ ಕ್ಷೇತ್ರಗಳ ನಡುವೆ ಸಹಕಾರಿ ಕ್ಷೇತ್ರದ ಪೈಪೋಟಿಯನ್ನು ಎದುರಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.



ಹಿರಿಯ ಸಹಕಾರಿಗಳು ಹಾಗೂ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕ ಸಿ.ಬಿ. ದೊಡ್ಡಗೌಡ್ರ ಮಾತನಾಡುತ್ತಾ, ಪ್ಯಾಕ್ಸ್‌ಗಳನ್ನು ಸಾಮಾನ್ಯ ಸೇವಾ ಕೇಂದ್ರಗಳಲ್ಲಿಯ ಸೌಲಭ್ಯಗಳನ್ನು ಅಳವಡಿಕೊಂಡು ಸಹಕಾರಿಗಳಿಗೆ ಅನುವು ಮಾಡಿಕೊಡುವುದು ಅತೀ ಅವಶ್ಯ. ಹಲವು ಅಂಶಗಳನ್ನು ಪರಿಶೀಲನೆ ಮಾಡಿದ ಮೇಲೆ ಮುದ್ದತ ಮೀರಿದ ಸಾಲದ ವಸೂಲಾತಿಗೆ ಕ್ರಮವಿಡುವುದು, ಸುಸ್ತಿ ಸಾಲವನ್ನು ವಸೂಲು ಮಾಡಲು ಸಾಕಷ್ಟು ತಿಳುವಳಿಕೆ ನೋಟಿಸುಗಳನ್ನು ಕಳಿಸಲು ಕ್ರಮ ವಹಿಸುವುದು ಎಮದರು.

ಗದಗ ಜಿಲ್ಲಾ ಸಹಕಾರ ಯುನಿಯನ್ ನಿರ್ದೇಶಕ ಸುರೇಶಗೌಡ ಎಂ.ಪಾಟೀಲ ಮಾತನಾಡುತ್ತಾ, ಪ್ಯಾಕ್ಸ್‌ಗಳು ಆರ್ಥಿಕವಾಗಿ ಸಬಲಗೊಂಡು ಲಾಭದಾಯಕವಾಗಿ ಕೆಲಸ ನಿರ್ವಹಿಸಿದರೆ ಸಹಕಾರ ಚಳುವಳಿಗೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ ಎಂದರು. ಕೆ.ಸಿ.ಸಿ ಬ್ಯಾಂಕ್ ರೋಣ ನಿರೀಕ್ಷಕ ಎ.ಎ. ಶಾಬಾದಿ, ಕೆ.ಸಿ.ಸಿ ಬ್ಯಾಂಕ್ ರೋಣ ಕಿರಿಯ ನಿರೀಕ್ಷಕರುಗಳಾದ ಜಿ.ಪಿ. ರಾಠೊಡ, ಎಂ.ಬಿ. ಪೂಜಾರಿ ಉಪಸ್ಥಿತರಿದ್ದರು. ಕಾರ್ಯಾಗಾರದಲ್ಲಿ ಕೆ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಸಿ.ಬಿ. ದೊಡ್ಡಗೌಡ್ರ, ಕೆ.ಓ.ಎಫ್. ಹುಬ್ಬಳ್ಳಿ ಮಾಜಿ ಅಧ್ಯಕ್ಷ ವ್ಹಿ.ಬಿ. ಚಿಕ್ಕರಡ್ಡಿ, ರೋಣ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಉಪನ್ಯಾಸ ನೀಡಿದರು. ಹಿರೇಹಾಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕ ಶಂಕರಗೌಡ ವ್ಹಿ.ಗೌಡರ ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಯೂನಿಯನ್‌ನ ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

> ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಮಾತನಾಡಿ, ಉತ್ತಮ ಸೇವೆ ಎಂದರೆ, ಎಲ್ಲರೂ ಸಂಸ್ಥೆಗೆ ಬಂದು ಯಾವುದೇ ತಾರತಮ್ಯವಿಲ್ಲದೆ ಅವರ ಕೆಲಸಗಳನ್ನು ಸಕಾಲದಲ್ಲಿ ಪೂರೈಸಿಕೊಂಡು ಹೋಗುವಂತಿರಬೇಕು. ಸಹಕಾರ ಸಂಸ್ಥೆಗಳು ತಮ್ಮ ಸದಸ್ಯರಿಗೆ ಅಥವಾ ಗ್ರಾಹಕರಿಗೆ ನೀಡುವ ಸೇವೆಗಳಲ್ಲಿ ಏನಾದರೂ ನ್ಯೂನತೆಗಳು ಕಂಡು ಬಂದಲ್ಲಿ ತಕ್ಷಣವೇ ಅವುಗಳನ್ನು ಗಮನಿಸಿ, ಸೂಕ್ತ ಕ್ರಮಗಳನ್ನು ಕೈಗೊಂಡಾಗ ಸಂಸ್ಥೆಯ ಮೇಲಿನ ವಿಶ್ವಾಸ ಹೆಚ್ಚುತ್ತದೆ ಎಂದರು.

# ವಿಘ್ನೇಶ್ವರನಿಗೆ ಧಾನ್ಯಗಳ ವಿಶೇಷ ಪೂಜೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಪಂ. ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದ ಎ.ಪಿ.ಎಂ.ಸಿ ಯಾರ್ಡ್, ಗದಗ ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗಿದೆ.

ಗುರುವಾರ ಎರಡನೇ ದಿನದ ಗಣೇಶನ ಪೂಜಾ ಕಾರ್ಯಕ್ರಮವನ್ನು ದಲಾಲ ವರ್ತಕರ ಸಂಘದ ವತಿಯಿಂದ ನವಧಾನ್ಯಗಳನ್ನು ಗಣೇಶನ ಮುಂದೆ ಇಟ್ಟು ರೈತರ ಬೆಳೆಗಳು ರೋಗಮುಕ್ತವಾಗಿ, ಹುಲುಸಾಗಿ ಬೆಳೆದು ರೈತರ ವಿಘ್ನಗಳು ದೂರವಾಗಲಿ ಎಂದು ವಿಘ್ನ ವಿನಾಯಕನಲ್ಲಿ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು.

ಪೂಜಾ ಕಾರ್ಯಕ್ರಮದಲ್ಲಿ ದಲಾಲ ವರ್ತಕರ ಸಂಘದ ಅಧ್ಯಕ್ಷ ಮುರಘರಾಜೇಂದ್ರ ಬಡ್ನಿ, ಗದಿಗೆಪ್ಪ ದಿಂಡೂರ, ಮೌಲಾಸಾಬ ಮೌಲಾಲಿ, ಕೆ.ಎನ್. ಪಾಟೀಲ, ಹುಚ್ಚಪ್ಪ ಶಾಪೂರ, ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ್ ವಾರಕರ, ಕಾರ್ಯದರ್ಶಿ ರಾಜು ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನಿತೀಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ಕಾಡಪ್ಪನವರ, ಬಸವರಾಜ ಕಾಡಪ್ಪನವರ, ಪ್ರವೀಣ, ವಿನೀತ ಕವಲೂರ, ಶರತ್ ಅಗಡಿ, ಸಾಗರ ವಜ್ರೇಶ್ವರಿ, ಅಜಿತ ಪುಣೇಕರ್, ಬಸವರಾಜ ಬಾವಿಕಟ್ಟಿ ಮುಂತಾದವರಿದ್ದರು.

# ಇಬ್ಬರು ಅಂತರರಾಜ್ಯ ಆರೋಪಿಗಳ ಬಂಧನ!

▶▶ಮೊದಲನೇ ಪುಟದಿಂದ

ಪಿಎಸ್‌ಐಗಳಾದ ಮಾರುತಿ ಎಸ್. ಜೋಗದಂಡಕರ, ಬಿ.ಟಿ. ರಿತ್ತಿ ನೇತೃತ್ವದಲ್ಲಿ ಎಎಸ್‌ಐ ಬಿ.ಎಫ್. ಯರಗುಪ್ಪಿ, ಸಿಬ್ಬಂದಿಗಳಾದ ಎನ್.ಡಿ. ಹುಬ್ಬಳ್ಳಿ, ಪರಶುರಾಮ ಎಚ್. ದೊಡಮನಿ, ಪ್ರವೀಣ ಕಲ್ಲೂರ, ನಾಗರಾಜ ಬರಡಿ, ಅಶೋಕ ಗದಗ, ಅಕ್ಷಯ ಬದಾಮಿ, ಅವಿನಾಶಸಿಂಗ್ ಬ್ಯಾಳಿ, ಗೌರಮ್ಮ ಕಂಡೆಣ್ಣನವರ, ಮಂಜು ಆರ್. ಲಮಾಣಿ, ಎಸ್.ಎಚ್. ಗುಡ್ಡಿಮಠ, ಮಂಜು ಅಸೂಟಿ, ಅನಿಲ ಬನ್ನಿಕೊಪ್ಪ, ಮತ್ತು ತಾಂತ್ರಿಕ ವಿಭಾಗದ ಅಧಿಕಾರಿಗಳಾದ ಶಿವಕುಮಾರ ಟಿ., ಗುರುರಾಜ ಬೂದಿಹಾಳ, ಸಂಜು ಕೊರಡೂರ ಈ ತಂಡದಲ್ಲಿ ಇದ್ದರು. ಇನ್ನೂ ಆರೋಪಿಗಳನ್ನು ಬೆನ್ನಟ್ಟಿದ ಪೊಲೀಸರು ಕೊಲ್ಲಾಪೂರದ ಗಾಂಧಿನಗರದಲ್ಲಿ ಬಂಧಿಸಿದರು. ಈಗಾಗಲೇ ಆರೋಪಿಗಳ ಮೇಲೆ ಬಾಗಲಕೋಟೆ, ಆಂಧ್ರಪ್ರದೇಶದ ಗುಂತಕಲ್ ಮತ್ತು ಅನಂತಪುರದಲ್ಲಿ ಒಟ್ಟು ಮೂರು ಪ್ರಕರಣಗಳು ದಾಖಲಾಗಿತ್ತು. ಸದ್ಯ ಆರೋಪಿಗಳಿಂದ 80,000 ರೂ. ಬೆಲೆ ಬಾಳುವ 2 ಬೈಕ್ ಗಳು, 2 ಮೊಬೈಲ್ ಫೋನ್'ಗಳು, 91 ಗ್ರಾಂ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ. ಇನ್ನೂ ಈ ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಯವರನ್ನು ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ ಶ್ಲಾಘಿಸಿ, ಸೂಕ್ತ ಬಹುಮಾನ ಘೋಷಿಸಿದ್ದಾರೆ.



ಗದುಗಿನ ಶ್ರೀ ಪಂ. ಪಂಚಾಕ್ಷರಿ ಗವಾಯಿಗಳವರ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣ ಎ.ಪಿ.ಎಂ.ಸಿ ಯಾರ್ಡ್, ದಲಾಲ ವರ್ತಕರ ಹಾಗೂ ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪನೆ ಮಾಡಿರುವ ಆಕರ್ಷಕ ಅಲಂಕಾರದ ಗಣೇಶ ಮೂರ್ತಿ ಭಕ್ತಾದಿಗಳನ್ನು ಸೆಳೆಯುತ್ತಿದೆ.

# ಎಸ್.ಡಿ.ಎಂ.ಸಿ ಅಧ್ಯಕ್ಷ ಮುತ್ತು ಹೂಗಾರಗೆ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ಹಿರೇಹಂದಿಗೋಳ ಗ್ರಾಮದ ಸರಕಾರಿ ಪ್ರೌಢಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ಆಯ್ಕೆಯಾದ ಮುತ್ತು ಹೂಗಾರರಿಗೆ ಗದುಗಿನ ಶ್ರೀ ಮೃತ್ಯುಂಜಯ ಸೇವಾ ಸಮಿತಿ ಬಳಗದವರಿಂದ ಗೌರವಿಸಲಾಯಿತು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಹಿರಿಯ ಸಾಹಿತಿ ಶಿವಶಂಕ್ರಪ್ಪ ಆರಟ್ಟಿ ಮಾತನಾಡಿ, ಮುತ್ತು ಹೂಗಾರ ಉತ್ತಮ ಸಂಘಟಕರಾಗಿದ್ದು, ಸಾಮಾಜಿಕವಾಗಿ, ಧಾರ್ಮಿಕವಾಗಿ ನಡೆಯುವ ಕಾರ್ಯಕ್ರಮಗಳಲ್ಲಿ ಸಹಕಾರ ನೀಡುತ್ತ ಬಂದಿದ್ದಾರೆ. ಇಂತಹ ಕ್ರಿಯಾಶೀಲ ವ್ಯಕ್ತಿಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದು ಸೂಕ್ತ ಹಾಗೂ ಹೆಮ್ಮೆಯ ವಿಷಯವಾಗಿದೆ ಎಂದರು.



ಹಿರಿಯ ಸಾಹಿತಿ, ಗುರು ಮೃತ್ಯುಂಜಯ

ಸೇವಾ ಸಮಿತಿ ಅಧ್ಯಕ್ಷ ಐ.ಕೆ. ಕಮ್ಮಾರ ಮಾತನಾಡಿ, ಶಿಕ್ಷಣದ ಬಗ್ಗೆ ಹೆಚ್ಚು ಆಸಕ್ತಿ ಮತ್ತು ಪ್ರೀತಿ ಇರುವ ವ್ಯಕ್ತಿ ಮುತ್ತು ಹೂಗಾರ, ಹಿರೇಹಂದಿಗೋಳ ಸರಕಾರಿ ಪ್ರೌಢಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿದ್ದು ಹೆಮ್ಮೆಯ ಸಂಗತಿಯಾಗಿದೆ. ಇವರ ಅವಧಿಯಲ್ಲಿ ಶಾಲೆ ಅಭಿವೃದ್ಧಿಯಾಗಲೆಂದು ಶುಭ ಹಾರೈಸಿದರು.

ಸಂಭಾಪುರದ ಹಿರಿಯರಾದ ರಾಯಪ್ಪ ನಾಗನೂರ, ಚಿಕ್ಕೋಪ್ಪದ ಶಿವಣ್ಣ ಒಡೆಯರ, ಸಾಹಿತಿ ಅಂದಾನೆಪ್ಪ ವಿಭೂತಿ, ಆರ್.ಸಿ. ಹಿರೇಮಠ, ಮುತ್ತು ಮುಂತಾದವರು ಉಪಸ್ಥಿತರಿದ್ದು ಶುಭ ಕೋರಿದರು. ದರ್ಶನ ಬಡಿಗಣ್ಣವರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ತಾಲೂಕಾ ಮಟ್ಟದ ವಿಜ್ಞಾನ ಗೋಷ್ಠಿ, ವಿಜ್ಞಾನ ನಾಟಕಗಳ ಸ್ಪರ್ಧೆ

# ಸುಜ್ಞಾನದ ಅಡಿಯಲ್ಲಿ ವಿಜ್ಞಾನ ಕಲಿಯಬೇಕು




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಹುಲ್ಲೂರು ಗ್ರಾಮದ ಸರಕಾರಿ ಪ್ರೌಢಶಾಲೆಯ ಆವರಣದಲ್ಲಿ ಸೋಮವಾರ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಹಮ್ಮಿಕೊಳ್ಳಲಾಗಿದ್ದ ತಾಲೂಕಾ ಮಟ್ಟದ ವಿಜ್ಞಾನ ಗೋಷ್ಠಿ ಹಾಗೂ ವಿಜ್ಞಾನ ನಾಟಕಗಳ ಸ್ಪರ್ಧೆ ಕಾರ್ಯಕ್ರಮಗಳು ಯಶಸ್ವಿಯಾಗಿ ನೆರವೇರಿದವು.

ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಉದ್ಘಾಟಿಸಿ ಮಾತನಾಡಿ, ಸುಜ್ಞಾನದ ಅಡಿಯಲ್ಲಿ ವಿಜ್ಞಾನದ ಕಲಿಕೆ ಆಗಬೇಕು. ಅಂತಹ ವಿಜ್ಞಾನದಿಂದ ಪರಿಪೂರ್ಣ ವ್ಯಕ್ತಿತ್ವ, ಸುಭದ್ರ ಸಮಾಜ, ರಾಜ್ಯ, ರಾಷ್ಟ್ರ ನಿರ್ಮಾಣವಾಗುತ್ತದೆ. ಅಂತಹ ವಿಜ್ಞಾನದ ಕಲಿಕೆ ವಿಜ್ಞಾನದ ಇಂತಹ ಕಾರ್ಯಕ್ರಮಗಳ ಮುಖಾಂತರ ಸಾಧ್ಯವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನ್ಯಾಸಕ ಜಿ.ಡಿ. ದಾಸರ ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ವಿಜ್ಞಾನದಂತಹ ವಿಷಯಗಳಲ್ಲಿ ಇಂದು ಉತ್ತಮ ಸಾಧನೆ ಮಾಡುತ್ತಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನದ ಬಳಕೆ ಇಂದು ಗ್ರಾಮೀಣ ಭಾಗಗಳಲ್ಲಿ ಹೆಚ್ಚುತ್ತಿದೆ. ಅಂತಹ ಜ್ಞಾನಗಳ ಪರಿಚಯ ಪ್ರೌಢಶಾಲಾ ಹಂತದಲ್ಲಿಯೇ ಮಾಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಕೆ.ವೈ. ಮೇಲಿನಮನಿ ಮಾತನಾಡಿ, ಸಮುದಾಯದ ಸಮರ್ಥ ಸಹಭಾಗಿತ್ವವು ಉತ್ತಮ ಶಾಲೆ, ಅತ್ಯುತ್ತಮ ಶೈಕ್ಷಣಿಕ ಪ್ರಗತಿಗೆ ಮುಖ್ಯ ಕಾರಣವಾಗಬಹುದು ಎಂಬುದಕ್ಕೆ ಹುಲ್ಲೂರು ಗ್ರಾಮ ಉತ್ತಮ ಉದಾಹರಣೆಯಾಗಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ನೋಡಲ್ ಬಿ.ಆರ್.ಪಿ ಈಶ್ವರ ಮೆಡ್ಲೇರಿ, ವೈಜ್ಞಾನಿಕ ಮನೋಭಾವವನ್ನು ಮತ್ತಷ್ಟು ಹೆಚ್ಚಿಸುವ ದೃಷ್ಟಿಯಿಂದ ವಿಜ್ಞಾನ ವಿಚಾರಗೋಷ್ಠಿ ಹಾಗೂ ವಿಜ್ಞಾನ ನಾಟಕ ಸ್ಪರ್ಧೆ ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿ ವರ್ಷ ತಾಲೂಕಿನಿಂದ ಆಯ್ಕೆಯಾಗಿರುವ ತಂಡಗಳು ರಾಜ್ಯ, ರಾಷ್ಟ್ರ ಹಾಗೂ ಜೋನಲ್ ಹಂತದವರೆಗೆ ಹೋಗಿ ತಾಲೂಕಿಗೆ ಕೀರ್ತಿ ತಂದಿವೆ ಎಂದರು.

ಹುಲ್ಲೂರು ಗ್ರಾಮ ಪಂಚಾಯಿತಿ ಸದಸ್ಯ ಪರಮೇಶ್ವರಗೌಡ ಪಾಟೀಲ, ಮಾಜಿ ಉಪಾಧ್ಯಕ್ಷ ಮಾಬುಲಿ ಗಾಡಗೋಳಿ ಮಾತನಾಡಿದರು. ವೇದಿಕೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ಜಿಲ್ಲಾಧ್ಯಕ್ಷ, ಉಪನ್ಯಾಸಕ ರಮೇಶ ರಿತ್ತಿ, ಯಲ್ಲಪ್ಪ ನರಸೋಜಿ, ಶೇಖಣ್ಣ ಸಾಸಲವಾಡ, ಎಸ್.ಡಿ.ಎಂ.ಸಿ ಅಧ್ಯಕ್ಷ ಶಂಕ್ರಣ್ಣ ಮಾಗಡಿ, ಅಶೋಕ ಹಾವೇರಿ, ಶಂಕ್ರಣ್ಣ ಮೂಕಿ, ಆನಂದ ಮುಳಗುಂದ, ಶಿಕ್ಷಣ ಸಂಯೋಜಕ ಉಮೇಶ ಹುಚ್ಚಯ್ಯನಮಠ, ಮುಖ್ಯೋಪಾಧ್ಯಾಯ ಹರೀಶ ಎಸ್, ಈರಣ್ಣ ಗಾಣಿಗೇರ, ಶೇಖರ ಚಿಕ್ಕಣ್ಣವರ, ನವೀನ ಅಂಗಡಿ ಉಪಸ್ಥಿತರಿದ್ದರು.

ಸಿ.ಆರ್.ಪಿ ಗಿರೀಶ ನೇಕಾರ ಸ್ವಾಗತಿಸಿದರು. ಶಿಕ್ಷಕ ಸಿದ್ದಲಿಂಗೇಶ ಹಲಸೂರ ನಿರೂಪಿಸಿದರು. ಬಿ.ಎಸ್. ಕೊಪ್ಪದ ವಂದಿಸಿದರು.

> **ಸ್ಪರ್ಧೆಗಳ ಫಲಿತಾಂಶ**
>
> ವಿಜ್ಞಾನ ಗೋಷ್ಠಿ ಸ್ಪರ್ಧೆಯಲ್ಲಿ ಶ್ರಾವ್ಯ ಹಿರೇಮಠ, ವಿದ್ಯಾಪೀಠ ಪಾಠಶಾಲಾ ಲಕ್ಷ್ಮೇಶ್ವರ (ಪ್ರಥಮ), ರೇಣುಕಾ ಮುಶಪ್ಪನವರ, ಸಿಸಿಎನ್ ಸರ್ಕಾರಿ ಪ್ರೌಢಶಾಲೆ ಶಿರಹಟ್ಟಿ (ದ್ವಿತೀಯ), ವೀಣಾ ವಡ್ಡಟ್ಟಿ, ಕೆಪಿಎಸ್ ಪ್ರೌಢಶಾಲೆ ಬೆಳ್ಳಟ್ಟಿ (ತೃತೀಯ) ಸ್ಥಾನ ಪಡೆದುಕೊಂಡರು.
>
> ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ಪ್ರಿಯಾಂಕ ಗುಡಗುಂಟಿ ಹಾಗೂ ಸಂಗಡಿಗರು, ಲಿಟಲ್ ಹಾರ್ಟ್ಸ್ ಇಂಟರ್ನ್ಯಾಷನಲ್ ಸ್ಕೂಲ್ ಲಕ್ಷ್ಮೇಶ್ವರ (ಪ್ರಥಮ), ರೀತು ಭರಮರಡ್ಡಿ ಸಂಗಡಿಗರು, ಕೆಪಿಎಸ್ ಬೆಳ್ಳಟ್ಟಿ (ದ್ವಿತೀಯ), ಸಿಂಚನಾ ಸಂಗಡಿಗರು, ಸಿಸಿಎನ್ ಸರ್ಕಾರಿ ಪ್ರೌಢಶಾಲೆ ಶಿರಹಟ್ಟಿ (ತೃತೀಯ) ಸ್ಥಾನ ಪಡೆದುಕೊಂಡರು.

# ನೋ ಪಾರ್ಕಿಂಗ್‌ನಲ್ಲಿ ನಿಲ್ಲಿಸಿದ್ದ ಪೊಲೀಸ್ ಜೀಪಿಗೆ ಬಿತ್ತು 500 ರೂ. ದಂಡ!

**■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು**

ಪೊಲೀಸರಿಂದ ಪೊಲೀಸ್ ಜೀಪಿಗೇ ದಂಡ ವಿಧಿಸಿರುವಂತಹ ಘಟನೆ ಚಿಕ್ಕಮಗಳೂರು ಜಿಲ್ಲೆ ಕೊಪ್ಪ ಪಟ್ಟಣದಲ್ಲಿ ನಡೆದಿದೆ.

ನೋ ಪಾರ್ಕಿಂಗ್ ನಲ್ಲಿ ನಿಲ್ಲಿಸಿದ್ದ ಎನ್‌ಆರ್ ಪುರ ಠಾಣೆಯ ಪೊಲೀಸ್ ಜೀಪಿಗೆ ಕೊಪ್ಪದ ಪೊಲೀಸರು 500 ರೂ. ದಂಡ ವಿಧಿಸಿದ್ದಾರೆ. ಎನ್‌ಆರ್ ಪುರ ಠಾಣೆಯ ಸಿಪಿಐ ಜೀಪು ನೋ ಪಾರ್ಕಿಂಗ್ ನಲ್ಲಿ ನಿಲ್ಲಿಸಲಾಗಿತ್ತು. ಈ ವೇಳೆ ಗಸ್ತಿನಲ್ಲಿದ್ದ ಪೊಲೀಸರು ವಾಹನ ಲಾಕ್ ಮಾಡಿದ್ದರು.

ಕೊಪ್ಪ ಪಿ.ಎಸ್.ಐ. ಬಸವರಾಜ್ ರಿಂದ ಎನ್. ಆರ್.ಪುರ ಸಿಪಿಐ ಜೀಪಿಗೆ ಫೈನ್ ಹಾಕಿದ್ದು, ಸದ್ಯ 500 ದಂಡ ಕಟ್ಟಿ ಚಾಲಕ ವಾಹನವನ್ನು ಬಿಡಿಸಿಕೊಂಡು ಹೋಗಿದ್ದಾರೆ. ಕಾನೂನು ಎಲ್ಲರಿಗೂ ಒಂದೇ ಎಂಬ ಸಂದೇಶವನ್ನು ಪಿಎಸ್‌ಐ ಸಾರಿದ್ದು, ಕೊಪ್ಪ ಪಿಎಸ್‌ಐ ಬಸವರಾಜ್ ಕಾರ್ಯಕ್ಕೆ ಚಿಕ್ಕಮಗಳೂರು ಜನ ಮೆಚ್ಚಿಗೆ ವ್ಯಕ್ತಪಡಿಸಿದ್ದಾರೆ.

# ಪ್ರೊ. ಸಿದ್ಧು ಯಾಪಲಪರವಿ ಅವರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಬಾಲ್ಕಿ ಚನ್ನಬಸವ ಆಶ್ರಮ ಪರಿಸರದಲ್ಲಿ ಅಮರಾವತಿ ಶಿವಯ್ಯ ಹಿರೇಮಠ ಪ್ರತಿಷ್ಠಾನದ ವತಿಯಿಂದ ಪ್ರತಿವರ್ಷ ಕೊಡಮಾಡುವ 'ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದ್ದೇವರು ಸಾಹಿತ್ಯ ಪ್ರಶಸ್ತಿ-2025'ಕ್ಕೆ ಭಾಜನರಾದ ಗದುಗಿನ ವಚನ ಟಿ.ವಿ ವ್ಯವಸ್ಥಾಪಕ ನಿರ್ದೇಶಕ ಪ್ರೊ. ಸಿದ್ಧು ಯಾಪಲಪರವಿ ಇವರನ್ನು ಬಸವಳದ-ಬಸವಕೇಂದ್ರ-ಲಿಂಗಾಯತ ಪ್ರಗತಿಶೀಲ ಸಂಘ, ಶರಣ ಸಾಹಿತ್ಯ ಪರಿಷತ್ತು, ಜಾಗತಿಕ ಲಿಂಗಾಯತ ಮಹಾಸಭಾದ ಗದಗ ಜಿಲ್ಲಾ ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಶರಣರಾದ ಕೆ.ಎಸ್. ಚೆಟ್ಟಿ, ಎಸ್.ಎಂ. ಕವಳಿಕಾಯಿ, ಎಂ.ಬಿ. ಲಿಂಗಧಾಳ, ಎನ್.ಎಚ್. ಹಿರೇಸಕ್ಕರಗೌಡ್ರ, ಪ್ರಕಾಶ ಅಸುಂಡಿ, ಬಸವರಾಜ ಹಿರೇಹಡಗಲಿ, ಎಸ್.ಎ. ಮುಗದ, ಶಿವನಗೌಡ ಗೌಡರ, ಶರಣೆಯರಾದ ಡಾ. ಗಿರಿಜಾ ಹಸಬಿ, ಗೌರಕ್ಕ ಬಡಿಗಣ್ಣವರ, ಗಂಗಮ್ಮ ಹೂಗಾರ, ಪದ್ಮಾವತಿ ಹಂಜಗಿ ಮುಂತಾದವರು ಇದ್ದರು.

### ಜಿ.ಪಂ ಸಿಇಓ ಭುವನೇಶ್ ಪಾಟೀಲ್ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ

# ಗುರಿ ನಿಗದಿಪಡಿಸಿ ಪ್ರಗತಿ ಸಾಧಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ್ ಪಾಟೀಲ್ ಅಧ್ಯಕ್ಷತೆಯಲ್ಲಿ ಧಾರವಾಡ ಜಿ.ಪಂ ಸಭಾಂಗಣದಲ್ಲಿ ಗುರುವಾರ ಎಲ್ಲಾ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.



ಗ್ರಾ.ಪಂಗಳ ವಿದ್ಯುತ್ ಬಿಲ್ ಬಾಕಿ ಮರು ಹೊಂದಾಣಿಕೆ, ಸ್ವಚ್ಛ ಭಾರತ ಮಿಷನ್, ಸಕಾಲ, ಸಾರ್ವಜನಿಕ ಕುಂದುಕೊರತೆ, ತೆರಿಗೆ ವಸೂಲಾತಿ, ವಸತಿ ಯೋಜನೆ, 15ನೇ ಹಣಕಾಸು, ಮಹಾತ್ಮ ಗಾಂಧಿ ನರೇಗಾ ಯೋಜನೆ, ಸಾಮಾಜಿಕ ಲೆಕ್ಕ ಪರಿಶೋಧನೆ, ಬೂದು ನೀರು ನಿರ್ವಹಣೆ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಜಿ.ಪಂ ಸಿಇಓ ಭುವನೇಶ್ ಪಾಟೀಲ್ ಮಾತನಾಡಿ, ಬಾಕಿ ಕರ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ಪ್ರತಿ ತಿಂಗಳು ಶೇ.10ರಷ್ಟು ಗುರಿ ನಿಗದಿಪಡಿಸಿಕೊಂಡು ಪ್ರಗತಿ ಸಾಧಿಸಬೇಕು. ಜಿಲ್ಲೆಯಲ್ಲಿ ಗ್ರಂಥಾಲಯ ಉಪಕರ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ಪ್ರತಿ ತಿಂಗಳು ಶೇ.10ರಷ್ಟು ಗುರಿ ನಿಗದಿಪಡಿಸಿಕೊಂಡು ಪ್ರಗತಿ ಸಾಧಿಸಬೇಕು. IPGRS – E – ಗ್ರಾಮಸ್ವರಾಜ್ ತಂತ್ರಾಂಶದಲ್ಲಿ ಅನುಮೋದಿತ ಕ್ರಿಯಾ ಯೋಜನೆಯನ್ನು ಅಳವಡಿಸುವುದು, ಇ-ಸ್ವತ್ತು 30 ದಿನಗಳಿಗಿಂತ ಹೆಚ್ಚು ಕಾಲ ವಿಲೇವಾರಿಯಾಗದೇ ಬಾಕಿ ಉಳಿಸಿಕೊಂಡಿದ್ದು ಈ ಕುರಿತು ಕ್ರಮ ವಹಿಸಬೇಕೆಂದು ಸೂಚಿಸಿದರು.

ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿ ವೈಯಕ್ತಿಕ ಶೌಚಾಲಯ ಹಾಗೂ ಸಮುದಾಯ ಶೌಚಾಲಯ ನಿರ್ಮಾಣ ಮಾಡಲು ಕಾರ್ಯಾದೇಶ ನೀಡಿದ ಫಲಾನುಭವಿಗಳು ತುರ್ತಾಗಿ ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸಭೆಯಲ್ಲಿ ಸೂಚಿಸಲಾಯಿತು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ 2025-26ನೇ ಸಾಲಿನ ವಾರ್ಷಿಕ ಗುರಿಗೆ ಅನುಗುಣವಾಗಿ ಪ್ರಗತಿ ಸಾಧಿಸದೇ ಕನಿಷ್ಠ ಪ್ರಗತಿ ಸಾಧಿಸಿರುವ ಗ್ರಾ.ಪಂಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನ ಹರಿಸಿ ಕೂಲಿಕಾರರಿಗೆ ಸ್ಥಳೀಯವಾಗಿ ಕೆಲಸ ಒದಗಿಸಿ ಪ್ರಗತಿ ಸಾಧಿಸಬೇಕು. ಮಹಿಳಾ ಭಾಗವಹಿಸುವಿಕೆ ಪ್ರಮಾಣವನ್ನು ಸರಕಾರದಿಂದ ನಿಗದಿಪಡಿಸಿದ ಶೇ.50ರಷ್ಟು ಗುರಿ ಸಾಧಿಸಲು ಹಾಗೂ ಬೂದು ನೀರು ನಿರ್ವಹಣೆ ಕಾಮಗಾರಿಗಳ ಡಿಪಿಆರ್‌ಗಳನ್ನು ತಯಾರಿಸಿ ಸಲ್ಲಿಸಲು ಮತ್ತು ಜಿಲ್ಲೆಯಲ್ಲಿ ದಾಖಲಾಗಿರುವ ಸಾಮಾಜಿಕ ಲೆಕ್ಕ ಪರಿಶೋಧನಾ ಆಕ್ಷಪಣೆ ಮತ್ತು ವಸೂಲಾತಿ ಮಾಡಿ ಇತ್ಯರ್ಥಪಡಿಸಲು ಸಿಇಓ ಭುವನೇಶ್ ಪಾಟೀಲ್ ಸೂಚಿಸಿದರು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಮುಖ್ಯ ಯೋಜನಾ ಅಧಿಕಾರಿ ದೀಪಕ್ ಮಡಿವಾಳ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

---

### ಬಂಡೀಪುರದಿಂದ ಬೀದರ್‌ವರೆಗೆ 3 ದಿನಗಳ ಬೈಕ್ ಜಾಥಾ ಇಂದಿನಿಂದ

# ‘ನಶಾ ಮುಕ್ತ ಭಾರತ’ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ಆಚರಿಸುತ್ತಿರುವ ‘ನಶಾ ಮುಕ್ತ ಭಾರತ’ ಅಭಿಯಾನದ ಅಂಗವಾಗಿ, ಆಗಸ್ಟ್ 29ರಿಂದ 31ರವರೆಗೆ ಬಂಡೀಪುರದಿಂದ ಬೀದರ್‌ವರೆಗೆ 3 ದಿನಗಳ ಬೈಕ್ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಮದ್ಯಪಾನ ಮತ್ತು ಮಾದಕ ವಸ್ತುಗಳ ದುರುಪಯೋಗದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ರಾಜ್ಯ ಸರ್ಕಾರದ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ




ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್‌ಸಿಂಗ್ ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ ಮತ್ತು ಎನ್.ಸಿ.ಸಿ ಸಹಯೋಗದೊಂದಿಗೆ ಜಾಥಾ ಆಯೋಜಿಸಲಾಗುತ್ತಿದೆ. ಸಾರ್ವಜನಿಕರಿಂದ ಆಯ್ಕೆಯಾದ 20 ಬೈಕ್ ಸವಾರರು ಭಾಗವಹಿಸಲಿದ್ದಾರೆ. ಈ ಜಾಥಾ ಕಾರ್ಯಕ್ರಮವು ಮಾರ್ಗಮದ್ದಕ್ಕೂ ರಾಜ್ಯದ ಪ್ರಮುಖ ಜಿಲ್ಲೆಗಳ ಮೂಲಕ ಸಾಗುತ್ತಾ ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಿದೆ.

ಈ ಬೃಹತ್ ಅಭಿಯಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್ ಸಿಂಗ್, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಅರಣ್ಯ) ಮನೋಜಕುಮಾರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ) ಆರ್.ರವಿಶಂಕರ್, ಬಂಡೀಪುರ ಹುಲಿ ಮೀಸಲು ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ನಿರ್ದೇಶಕ ಎಸ್.ಪ್ರಭಾಕರನ್, ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಹಾಗೂ ಸರ್ಕಾರದ ಇತರ ಹಿರಿಯ ಅಧಿಕಾರಿಗಳು ಮತ್ತು ಗಣ್ಯರು ರೂಪಿಸಿದ್ದಾರೆ.

ದೇಶಾದ್ಯಂತ 1 ಲಕ್ಷ ಕಿಲೋಮೀಟರ್‌ಗಳಿಗೂ ಹೆಚ್ಚು ಪ್ರಯಾಣವನ್ನು ಸೈಕ್ಲಿಂಗ್‌ನಲ್ಲಿ ಕ್ರಮಿಸಿ ಅಪ್ರತಿಮ ಸಾಧನೆ ಮಾಡಿರುವ ರೈಡರ್ ನಂದಿನಿ ಮಿಥುನ್ ಈ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವುದು ವಿಶೇಷವಾಗಿದೆ. ಅವರು ತಮ್ಮ ಅಸಾಧಾರಣ ಅನುಭವಗಳು ಮತ್ತು ಬದ್ಧತೆಯಿಂದ ಸಾಮಾಜಿಕ ಉದ್ದೇಶಗಳ ಕಡೆಗೆ ಯುವಕರನ್ನು ಪ್ರೇರೇಪಿಸಲಿದ್ದಾರೆ.

ಈ ಗಣ್ಯರು ಶಾಲೆಗಳು, ಕಾಲೇಜುಗಳು, ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ಭಾಗವಹಿಸಿ, ಯುವಜನತೆಗೆ ಉದ್ದೇಶಿತ ಜಾಗೃತಿ ಭಾಷಣಗಳು ಮತ್ತು ಸಂದೇಶಗಳನ್ನು ನೀಡಲಿದ್ದಾರೆ. ಕರ್ನಾಟಕ ಸರ್ಕಾರವು ಈ ಜಾಥಾ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಗೆ ಮಾದಕ ದ್ರವ್ಯ ಮುಕ್ತ ಹಾಗೂ ಆರೋಗ್ಯಕರ ಸಮಾಜವನ್ನು ಸೃಷ್ಟಿಸುವ ಪ್ರಯತ್ನವಾಗಿ ಹಮ್ಮಿಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.

---

# ಮಹಾ ಅನ್ನಸಂತರ್ಪಣೆ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಸವೇಶ್ವರ ನಗರದ ಶ್ರೀ ವರಸಿದ್ಧಿ ವಿನಾಯಕ ಮಿತ್ರ ಮಂಡಳಿ ವತಿಯಿಂದ 133ನೇ ವರ್ಷದ ಸಾರ್ವಜನಿಕ ಗಣೇಶೋತ್ಸವ ಹಾಗೂ ಮಂಡಳಿಯ 27ನೇ ವರ್ಷದ ಗಜಾನನೋತ್ಸವ – 2025 ಅಂಗವಾಗಿ ಆಗಸ್ಟ್ 29ರ ಮುಂಜಾನೆ 10ಕ್ಕೆ ಲೋಕ ಕಲ್ಯಾಣಾರ್ಥವಾಗಿ ಸಹಸ್ರ ಮೋದಕ ಹೋಮ ಹಾಗೂ ಮಧ್ಯಾಹ್ನ 1.30ಕ್ಕೆ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅವಳಿ ನಗರದ ಸಕಲ ಸದ್ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಸಾದವನ್ನು ಸ್ವೀಕರಿಸಬೇಕೆಂದು ಮಂಡಳಿಯ ಅಧ್ಯಕ್ಷ ರಾಜು ರೊಟ್ಟಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

---

# 35 ಕುರಿಗಳ ಅಸಹಜ ಸಾವು



■ವಿಜಯಸಾಕ್ಷಿ ಸುದ್ದಿ, ಹಳಪನಹಳ್ಳಿ

ತಾಲೂಕಿನ ಮುತಿಗಿ ಗ್ರಾಮದ ಸಣ್ಣ ಹುಚ್ಚಪ್ಪನವರ ಕೊಟ್ರಪ್ಪನವರಿಗೆ ಸಂಬಂಧಿಸಿದ ಒಟ್ಟು 130 ಕುರಿಗಳಲ್ಲಿ 35 ಕುರಿಗಳು ಬುಧವಾರ ಮಧ್ಯಾಹ್ನ 1.30ರ ಹೊತ್ತಿಗೆ ನೀರು ಕುಡಿಸಲು ಹೋದ ವೇಳೆ ಸಾವನ್ನಪ್ಪಿವೆ.

ಅತಿಯಾದ ಮಳೆಯಾಗಿ ಕುರಿಗಳು ಹಲವಾರು ಕಾಯಿಲೆಗಳಿಗೆ ತುತ್ತಾಗಿದ್ದವು. ಹರಪನಹಳ್ಳಿಯ ಖಾಸಗಿ ಔಷಧಿ ಅಂಗಡಿಯೊಂದರಲ್ಲಿ ಔಷಧಿಯನ್ನು ತಂದು ಕುರಿಗಳಿಗೆ ಹಾಕಲಾಗಿತ್ತು. ಔಷಧಿಯನ್ನು ಹಾಕಿದ್ದರಿಂದಲೇ ಕುರಿಗಳು ಸಾವನ್ನಪ್ಪಿವೆ ಎಂಬ ಶಂಕೆ ವ್ಯಕ್ತವಾಗಿದ್ದು, ಪಶು ವೈದ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಶೀಲಿಸಿದ್ದಾರೆ.

ಕುರಿಗಳ ಮಾಲೀಕ ಸಣ್ಣ ಹುಚ್ಚಪ್ಪನವರ ಕೊಟ್ರಪ್ಪ ಮಾತನಾಡಿ, ಮೊನ್ನೆ ದಿನ ಕುರಿಗಳಿಗೆ ಔಷಧಿ ನೀಡಲಾಗಿತ್ತು. ಅದನ್ನು ಬಿಟ್ಟರೆ ಬೇರೆ ಯಾವ ಕಾರಣವೂ ಇಲ್ಲ. ಒಟ್ಟು 130 ಕುರಿಗಳಲ್ಲಿ 60 ಕುರಿಗಳು ಅಸ್ವಸ್ಥಗೊಂಡಿದ್ದು, 35 ಕುರಿಗಳು ಸಾವನ್ನಪ್ಪಿವೆ. ಬದುಕಿರುವ ಕುರಿಗಳಿಗೆ ವೈದ್ಯರು ಔಷಧಿಯನ್ನು ನೀಡಿದ್ದಾರೆ ಸರ್ಕಾರವು ಸೂಕ್ತ ಪರಿಹಾರ ನೀಡದಿದ್ದರೆ ನಮ್ಮ ಬದುಕು ಕಷ್ಟವಾಗುತ್ತದೆ ಎಂದು ಅಳಲು ತೋಡಿಕೊಂಡರು.

ಪಶುವೈದ್ಯಾಧಿಕಾರಿ ಶಿವಕುಮಾರ್ ಮಾತನಾಡಿ, ಔಷಧಿಯನ್ನು ಸೇವಿಸಿ ಸಾವನ್ನಪ್ಪಿರುವ ಬಗ್ಗೆ ಕುರಿಗಳ ಮಾಲೀಕರು ಸಂಶಯ ವ್ಯಕ್ತಪಡಿಸಿದ್ದಾರೆ. ಸತ್ತಿರುವ ಕುರಿಗಳ ಪರೀಕ್ಷೆ ನಡೆಸುತ್ತಿದ್ದೇವೆ. ವರದಿ ಬಂದ ನಂತರ ಪರಿಹಾರ ನೀಡುವ ಬಗ್ಗೆ ಚರ್ಚಿಸಲಾಗುವುದು ಎಂದರು.

---

# ಇಂದು ರಾಷ್ಟ್ರೀಯ ಕ್ರೀಡಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರ ಸಹಯೋಗದಲ್ಲಿ ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆಯನ್ನು ಆಗಸ್ಟ್ 29 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿಯ ಮಹಾತ್ಮಾಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ಗದಗ –ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಯೋಜನೆ ಕಾರ್ಯಕ್ರಮ , ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

ಪಂದ್ಯಾವಳಿಗಳ ವಿವರ

ಹಾಕಿ ಪಂದ್ಯಾವಳಿ: ದಿ: 29-8-2025 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿಯ ಮಹಾತ್ಮಾಗಾಂಧಿ ಹಾಕಿ ಕ್ರೀಡಾಂಗಣ ( ನಾಲ್ಕು ತಂಡಗಳಿಂದ ಮೂರು ಪಂದ್ಯಗಳು).

ಕುಸ್ತಿ ಪಂದ್ಯಾವಳಿ: ದಿ: 30-8-2025 ರಂದು ಶನಿವಾರ ಬೆಳಿಗ್ಗೆ 10.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆ.

ಸೈಕ್ಲಿಂಗ್ ಜಾಥಾ

ದಿ: 31-8-2025 ರಂದು ಬೆಳಿಗ್ಗೆ 7 ಗಂಟೆಗೆ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಶ್ರೀ ಬಸವೇಶ್ವರ ಮೂರ್ತಿಯವರೆಗೆ .

---


**ಗ್ರಾಮ ಪಂಚಾಯತ ಕಾರ್ಯಾಲಯ, ಚಿಕ್ಕಹಂದಿಗೋಳ**

**ತಾಲೂಕ:– ಗದಗ** **ಜಿಲ್ಲಾ:– ಗದಗ**

ಸಂ.ಗ್ರಾ.ಪಂ.ಚಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ:– 28/08/2025

**–: ದರಪಟ್ಟಿ ಪ್ರಕಟಣೆ :–**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕಹಂದಿಗೋಳ ಇವರು 2025– 26ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | 1514001008-25-348 ಚಿಕ್ಕಹಂದಿಗೋಳ ಗ್ರಾಮದ ಹಿಂದೂ ಸ್ಮಶಾನದಲ್ಲಿ ಶವ ಸುಡಲು ಶವಾಗಾರ ನಿರ್ಮಾಣ | 356472.84 | 500 | ಖಾಲಿ ಟೆಂಡರ್ ಪಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ:29-08-2025 ರಿಂದ 06-09-2025ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ :06-09-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ: 06-09-2025ರ ಮಧ್ಯಾಹ್ನ 3.00 ಗಂಟೆ

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಚಿಕ್ಕಹಂದಿಗೋಳದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ ಆಗಿದೆ/–**
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ**

**ಸಹಿ ಆಗಿದೆ/–**
**ಅಧ್ಯಕ್ಷರು,**
**ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ**


---

# “ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ” ಕುರಿತು ನಾಳೆ ವಿಚಾರ ಸಂಕಿರಣ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯು ಚಿತ್ರದುರ್ಗ ಪತ್ರಕರ್ತರ ಭವನದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಎಸ್.ಸಿ. ಎಸ್.ಟಿ. ಪತ್ರಿಕಾ ಸಂಪಾದಕರ ಸಂಘ ಹಾಗೂ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಆಗಸ್ಟ್ 30 ರಂದು “ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ” ಎಂಬ ವಿಷಯದ ಕುರಿತು ಒಂದು ದಿನದ ವಿಚಾರ ಸಂಕಿರಣವನ್ನು ಆಯೋಜಿಸಿದೆ.

ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಖಾತೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ವಿಚಾರ ಸಂಕಿರಣವನ್ನು ಉದ್ಘಾಟಿಸಲಿದ್ದಾರೆ.

ಡಾ. ಬಿ.ಆರ್. ಅಂಬೇಡ್ಕರ್ ಅವರ ಕ್ರಾಂತಿಕಾರಿ ಚಿಂತನೆಗಳು, ಇಂದಿನ ದಿನದಲ್ಲಿಯೂ ಅವುಗಳ ಪ್ರಸ್ತುತತೆ, ಪತ್ರಕರ್ತರಾಗಿ ಅವರ ಕೊಡುಗೆ ಮತ್ತು ಎಲ್ಲರನ್ನು ಒಳಗೊಂಡ ಸಮಾಜ ನಿರ್ಮಾಣಕ್ಕೆ ಮುಂದಿನ ಹಾದಿ ಮುಂತಾದ ವಿಷಯಗಳ ಚರ್ಚೆಗೆ ಈ ವಿಚಾರ ಸಂಕಿರಣವು ವೇದಿಕೆಯಾಗಲಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ.

ಹಿರಿಯ ಪತ್ರಕರ್ತ ಡಿ. ಉಮಾಪತಿ ಅವರು ದಿಕ್ಸೂಚಿ ಭಾಷಣ ಮಾಡುವರು. ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರಾದ ಕೆ.ವಿ. ಪ್ರಭಾಕರ್, ಸಂಸದ ಗೋವಿಂದ ಎಂ. ಕಾರಜೋಳ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ವಿಚಾರ ಸಂಕಿರಣದಲ್ಲಿ “ಅಂಬೇಡ್ಕರ್ ಅವರ ಪತ್ರಿಕಾ ವೃತ್ತಿ” ವಿಷಯದ ಕುರಿತು ಪತ್ರಕರ್ತರಾದ ಎನ್. ರವಿಕುಮಾರ್, “ಪತ್ರಕರ್ತರಾಗಿ ಅಂಬೇಡ್ಕರ್ ಅವರ ಬರವಣಿಗೆಗಳು” ವಿಷಯದ ಕುರಿತು ವಿ.ಎಲ್. ನರಸಿಂಹಮೂರ್ತಿ, “ಅಂಬೇಡ್ಕರ್ ದೃಷ್ಟಿಯಲ್ಲಿ ಲಿಂಗ ಸಮಾನತೆ” ಕುರಿತು ಡಾ. ಭಾರತಿದೇವಿ ಹಾಗೂ ಪತ್ರಕರ್ತರಲ್ಲಿ ಸಾಮಾಜಿಕ ನ್ಯಾಯದ ಪ್ರಜ್ಞೆ ವಿಷಯದ ಕುರಿತು ರಿಷಿಕೇಶ್ ಬಹದ್ದೂರ್ ದೇಸಾಯಿ ವಿಷಯ ಮಂಡಿಸಲಿದ್ದಾರೆ. ಹಿರಿಯ ಪತ್ರಕರ್ತ ಸನತ್ ಕುಮಾರ್ ಬೆಳಗಲಿ ಅವರು ಸಮಾರೋಪ ಭಾಷಣ ಮಾಡಲಿದ್ದಾರೆ.

ಪತ್ರಕರ್ತರು ಹಾಗೂ ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿಗಳಾದ ಸಹನಾ ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka